ಸಂಪುಟ: 11 ಸಂಚಿಕೆ: 185 ಪುಟ: 4+2 ಬೆಲೆ : 3.00 ಗುರುವಾರ, ಆಗಸ್ಟ್ 27, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 185 Pages : 4+2 Rate : 3.00 Thursday, August 27, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ದ್ಯಾಮವ್ವ-ದುರ್ಗಮ್ಮ ಹರಿ ಜಾತ್ರೆಯ ವೈಭವ | 140 ಕ್ವಿಂಟಾಲ್ ಬಂಡಾರದಲ್ಲಿ ಕಂಗೊಳಿಸಿದ ಅವಳಿ ನಗರ

# ಬಂಡಾರದಲ್ಲಿ ಮಿಂದೆದ್ದ ಭಕ್ತಸಾಗರ

**ವಿಜಯಸಾಕ್ಷಿ ಸುದ್ದಿ, ಗದಗ**

ಅವಳಿ ನಗರದ ಗ್ರಾಮ ದೇವತೆಗಳಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ ಹರಿ ಜಾತ್ರಾ ಮಹೋತ್ಸವದ ಅಂಗವಾಗಿ 18 ವರ್ಷಗಳ ಬಳಿಕ ಬುಧವಾರ ನಡೆದ ಬಂಡಾರದ ಜಾತ್ರೆ, ಅಪಾರ ಭಕ್ತಸಾಗರಕ್ಕೆ ಸಾಕ್ಷಿಯಾಯಿತು. 140 ಕ್ವಿಂಟಾಲ್ ಬಂಡಾರದಲ್ಲಿ ನಗರದ ಪ್ರಮುಖ ರಸ್ತೆಗಳು ಹಳದಿಮಯವಾಗಿ ಕಂಗೊಳಿಸಿದರೆ, ಸಹಸ್ರಾರು ಭಕ್ತರು ಪರಸ್ಪರ ಬಂಡಾರ ಹಚ್ಚಿಕೊಂಡು ದೇವಿಯರಿಗೆ ಭಕ್ತಿಯನ್ನು ಸಮರ್ಪಿಸಿ ಸಂಭ್ರಮಿಸಿದರು.

ಒಕ್ಕಲಗೇರಿಯ ದ್ಯಾಮವ್ವನ ಕಟ್ಟಿಯಿಂದ ಆರಂಭಗೊಂಡ ದೇವರ ಪಲ್ಲಕ್ಕಿಗಳ ಮೆರವಣಿಗೆ ಗಂಜಿ ಬಸವೇಶ್ವರ ವೃತ್ತ, ರಾಚೋಟೇಶ್ವರ ಗುಡಿ, ಹನುಮಾನ್ ಗರಡಿ, ಮಾಬುಸುಬಾನಿ ಕಟ್ಟಿ, ನಾಲ್ವಾಡ ಗಲ್ಲಿ, ತಿಲಕ್ ಪಾರ್ಕ್ ರಸ್ತೆ ಮಾರ್ಗವಾಗಿ ಜೋಡ ಮಾರುತಿ ದೇವಸ್ಥಾನದ ಎದುರಿನ ದುರ್ಗಾದೇವಿ ದೇವಸ್ಥಾನದವರೆಗೆ ಸಾಗಿತು.

ಮೆರವಣಿಗೆ ಸಾಗಿದ ರಸ್ತೆಯುದ್ದಕ್ಕೂ ಬಂಡಾರದ ಹಳದಿ ಬಣ್ಣವೇ ಕಂಗೊಳಿಸಿತು. ವಿವಿಧೆಡೆ ಬಂಡಾರ ತುಂಬಿದ ಚೀಲಗಳನ್ನು ಇರಿಸಲಾಗಿತ್ತು. ಭಕ್ತರು ಪರಸ್ಪರ ಬಂಡಾರ ಎರಚಿಕೊಂಡು, ಉಧೋ ಉಧೋ ಘೋಷಣೆಗಳನ್ನು ಮೊಳಗಿಸುತ್ತ ದೇವಿಯರ ಕೃಪೆಗೆ ಪಾತ್ರರಾಗಲು ಹಂಬಲಿಸಿದರು. ಮಹಿಳೆಯರು ಕುಂಭ-ಆರತಿ ಹಿಡಿದು ಮೆರವಣಿಗೆಯಲ್ಲಿ ಪಾಲ್ಗೊಂಡರೆ, ಮಕ್ಕಳು, ಯುವಕರು ಹಾಗೂ ಹಿರಿಯರು ಉತ್ಸಾಹದಿಂದ ಹೆಜ್ಜೆ ಹಾಕಿದರು.

**108 ಡೊಳ್ಳುಗಳ ನಿನಾದ; ಭಕ್ತಿಯ ಮೆರವಣಿಗೆ**

ಮೆರವಣಿಗೆಯಲ್ಲಿ 108 ಡೊಳ್ಳು ಕುಣಿತ, ಸಮ್ಮಾಳ, ಚಂಡಿ ವಾದ್ಯ, ವಿವಿಧ ವೇಷಧಾರಿಗಳ ತಂಡಗಳು ಸೇರಿದಂತೆ ಹಲವು ಕಲಾತಂಡಗಳು ಭಾಗವಹಿಸಿ ಜಾತ್ರೆಯ ಸಡಗರ ಹೆಚ್ಚಿಸಿದವು. ವಾದ್ಯಗಳ ಝೇಂಕಾರ, ಭಕ್ತರ ಜಯಘೋಷ ಹಾಗೂ ಬಂಡಾರದ ಎರಚಾಟದಿಂದ ಇಡೀ ನಗರವೇ ಜಾತ್ರೆಯ ಸಂಭ್ರಮದಲ್ಲಿ ಮಿಂದೆದ್ದಿತ್ತು.ಹರಿ ಜಾತ್ರೆಯ ಹಿನ್ನೆಲೆಯಲ್ಲಿ ಒಂಬತ್ತು ದಿನಗಳ ಕಾಲ ವಿಶೇಷ ನಿಯಮಗಳನ್ನು ಪಾಲಿಸಲಾಗಿತ್ತು. ಜಾತ್ರೆ ನಡೆಯುವ ಅವಧಿಯಲ್ಲಿ ಮನೆಗಳಲ್ಲಿ ಅಡುಗೆ ಮಾಡದಿರುವುದು, ಪಾದರಕ್ಷೆ ಧರಿಸದಿರುವುದು ಸೇರಿದಂತೆ ಹಲವು ಧಾರ್ಮಿಕ ಆಚರಣೆಗಳನ್ನು ಭಕ್ತರು ಶ್ರದ್ಧೆಯಿಂದ ಅನುಸರಿಸಿದರು.

12 ವರ್ಷಕ್ಕೊಮ್ಮೆ ನಡೆಯುವ ಈ ಜಾತ್ರೆ ಕೋವಿಡ್ ಕಾರಣದಿಂದ ಮುಂದೂಡಲ್ಪಟ್ಟಿತ್ತು. ಹೀಗಾಗಿ 18 ವರ್ಷಗಳ ಬಳಿಕ ನಡೆದ ಜಾತ್ರೆಗೆ ವಿಶೇಷ ಮಹತ್ವ ದೊರೆತಿದ್ದು, ಗದಗ-ಬೆಟಗೇರಿ ಅವಳಿ ನಗರ ಮಾತ್ರವಲ್ಲದೆ ಸುತ್ತಮುತ್ತಲಿನ ಜಿಲ್ಲೆಗಳಿಂದಲೂ ಭಕ್ತರು ಆಗಮಿಸಿದ್ದರು.

**ತವರುಮನೆಯಿಂದ ಗಂಡನ ಮನೆಗೆ ದೇವಿಯರ ಪಯಣ**

ಒಕ್ಕಲಗೇರಿಯ ದ್ಯಾಮವ್ವನ ಕಟ್ಟೆ ದೇವಿಯರ ತವರುಮನೆಯ ಪ್ರತೀಕವಾಗಿದ್ದು, ನಾಲ್ವಾಡ ಮನೆತನದ ಮಗಳು ಎಂಬ ನಂಬಿಕೆಯ ಹಿನ್ನೆಲೆಯಲ್ಲಿ ಮೆರವಣಿಗೆ ನಾಲ್ವಾಡದವರ ಮನೆಗೆ ತೆರಳಿ ಉಡಿ ತುಂಬಿಸಿಕೊಳ್ಳುವ ಸಂಪ್ರದಾಯ ನೆರವೇರಿತು. ಬಳಿಕ ಗಂಡನ ಮನೆಯಾದ ಕಿಲ್ಲಾ ಓಣಿಯತ್ತ ದೇವಿಯರ ಪಯಣ ಸಾಗಿತು. ಭಕ್ತರು ದೇವಿಯರಿಗೆ ಉಡಿ ತುಂಬಿ, ಹರಕೆ ಸಲ್ಲಿಸಿ ಇಷ್ಟಾರ್ಥ ಈಡೇರಿಸುವಂತೆ ಪ್ರಾರ್ಥಿಸಿದರು. ಗಂಡನ ಮನೆಗೆ ಬೀಳ್ಕೊಡುವ ಸಂಭ್ರಮದಲ್ಲೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.





### 18 ವರ್ಷಗಳ ಬಳಿಕ ಹಳದಿಮಯವಾದ ಗದಗ

**ಒಂಬತ್ತು ದಿನಗಳ ಹರಿ ಜಾತ್ರಾ ಮಹೋತ್ಸವದ ಕೊನೆಯ ದಿನ ನಡೆದ ಬಂಡಾರದ ಜಾತ್ರೆ ಭಕ್ತರ ಪಾಲಿಗೆ ಅವಿಸ್ಮರಣೀಯ ಕ್ಷಣವಾಯಿತು. 140 ಕ್ವಿಂಟಾಲ್ ಬಂಡಾರ, ಸಾವಿರಾರು ಭಕ್ತರ ಪಾಲ್ಗೊಳ್ಳುವಿಕೆ, 108 ಡೊಳ್ಳುಗಳ ನಿನಾದ ಹಾಗೂ ವೈವಿಧ್ಯಮಯ ಕಲಾತಂಡಗಳ ಪ್ರದರ್ಶನ ಜಾತ್ರೆಯ ವೈಭವವನ್ನು ಮತ್ತಷ್ಟು ಹೆಚ್ಚಿಸಿತು.**

**ಗದಗ-ಬೆಟಗೇರಿ ಗ್ರಾಮದೇವಿಯರ ಹರಿ ಜಾತ್ರೋತ್ಸವದ ಪ್ರಮುಖ ಆಕರ್ಷಣೆಯೇ ಬಂಡಾರದ ಜಾತ್ರೆ. ಅವಳಿ ನಗರ ಮಾತ್ರವಲ್ಲದೆ ಅಕ್ಕಪಕ್ಕದ ಜಿಲ್ಲೆಗಳಿಂದಲೂ ಸಾವಿರಾರು ಜನರು ಪಾಲ್ಗೊಂಡು ಜಾತ್ರೆಯ ಯಶಸ್ಸಿಗೆ ಕಾರಣರಾಗಿದ್ದಾರೆ.**

**-ವಸಂತ ಪಡಗದ,**
ಜಾತ್ರಾ ಸಮಿತಿ ಸಹ ಕಾರ್ಯದರ್ಶಿ

**ಬಂಡಾರದ ಜಾತ್ರೆಯಲ್ಲಿ ಸಾವಿರಾರು ಜನರು ಪಾಲ್ಗೊಂಡಿರುವುದು ನಮ್ಮ ಪ್ರಾಚೀನ ಸಂಸ್ಕೃತಿ ಹಾಗೂ ಪರಂಪರೆ ಇಂದಿಗೂ ಜೀವಂತವಾಗಿರುವುದಕ್ಕೆ ಸಾಕ್ಷಿಯಾಗಿದೆ. ಜಾತಿ, ಧರ್ಮದ ಭೇದವಿಲ್ಲದೆ ಎಲ್ಲರೂ ಒಂದಾಗಿ ಪಾಲ್ಗೊಂಡು ಜಾತ್ರೆಯನ್ನು ಅದ್ದೂರಿಗೊಳಿಸಿದ್ದಾರೆ.**

**-ಕೊಟ್ರಪ್ಪ ಕಮತರ**

**ಹಳದಿಮಯವಾದ ನಗರ**

ಬಂಡಾರದ ಜಾತ್ರೆಯ ಹಿನ್ನೆಲೆಯಲ್ಲಿ ನಗರದ ಪ್ರಮುಖ ರಸ್ತೆಗಳು ಹಳದಿ ಬಣ್ಣದಲ್ಲಿ ಮಿಂದೆದ್ದಿದ್ದವು. ಹಲವರು ಹಳದಿ ಬಣ್ಣದ ಉಡುಪು ಧರಿಸಿ ಜಾತ್ರೆಯ ಸಡಗರದಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಸಾವಿರಾರು ಭಕ್ತರು ಒಂದೆಡೆ ಸೇರಿದ್ದರಿಂದ ಜೋಡ ಮಾರುತಿ ದೇವಸ್ಥಾನ, ರಾಚೋಟೇಶ್ವರ ದೇವಸ್ಥಾನ ಹಾಗೂ ಮೇನ್ ಬಜಾರ್ ಸುತ್ತಮುತ್ತ ಕೆಲಕಾಲ ವಾಹನ ದಟ್ಟಣೆ ಉಂಟಾಯಿತು. ಪೊಲೀಸರು ಸ್ಥಳದಲ್ಲಿದ್ದು ಸಂಚಾರ ವ್ಯವಸ್ಥೆ ನಿಯಂತ್ರಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಬಂಡಾರ ಜಾತ್ರೆಯಲ್ಲಿ ವಿನೋದ ಮೊರಬದ, ಸಂಗಮೇಶ ಕವಳಿಕಾಯಿ, ಬಸವರಾಜ ತುಪ್ಪದ, ಸುನೀಲ ಮುದೇನಗುಡಿ, ಪ್ರವೀಣ ಅಂದೇಲಿ, ಮಲ್ಲು ಕಿರೇಸೂರು, ಶ್ರೀಧರ್ ವಜ್ರಬಂಡಿ, ರಾಜು ಖಾನಪ್ಪನವರ್ ಇತರರು ಭಾಗವಹಿಸಿದ್ದರು.

---

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಆ.29ರಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಆ.29ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಆಡಳಿತ ಭವನದ ರೂಂ ನಂ.215ರಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ. ಧಾರವಾಡದ ಯಶಸ್ವಿ ಗ್ರೂಪ್ ಕಂಪನಿ ನೇರ ಸಂದರ್ಶನದಲ್ಲಿ ಭಾಗವಹಿಸಲಿದ್ದು, ಐಟಿಐ, ಡಿಪ್ಲೊಮಾ ಹಾಗೂ ಎಂಜಿನಿಯರಿಂಗ್ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಪಾಲ್ಗೊಳ್ಳಬಹುದು. ಅಪರೆಂಟಿಸ್ ಟ್ರೇನಿ ಹುದ್ದೆಗಳು ಖಾಲಿ ಇದ್ದು, 18ರಿಂದ 28 ವರ್ಷ ವಯೋಮಿತಿಯ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ಧಾರವಾಡ, ಶಿರಸಿ ಹಾಗೂ ಹುಬ್ಬಳ್ಳಿಯಲ್ಲಿ ಉದ್ಯೋಗಾವಕಾಶಗಳಿವೆ. ನೇರ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ರೆಸ್ಯೂಮೆ (ಬಯೋಡಾಟಾ) ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ ತರಬೇಕು. ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 6363330688 ಅಥವಾ 8904908565ಕ್ಕೆ ಸಂಪರ್ಕಿಸಬಹುದು.

## ಅಲ್ಪಸಂಖ್ಯಾತರ ವಿವಿಧ ಯೋಜನೆಗಳಿಗೆ ಸಹಾಯಧನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2026-27ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಸಾಲ ಹಾಗೂ ಸಹಾಯಧನ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ಅಲ್ಪಸಂಖ್ಯಾತರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ, ಸ್ವಾವಲಂಬಿ ಸಾರಥಿ, ಶ್ರಮಶಕ್ತಿ ಸಾಲ, ವೃತ್ತಿ ಪ್ರೋತ್ಸಾಹ ಸಾಲ, ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ, ಗಂಗಾ ಕಲ್ಯಾಣ, ನವೋದಯ, ಫಾಸ್ಟ್‌ಫುಡ್ ಟ್ರಕ್/ಟೈಲರ್ ಕಿಚನ್ ಫುಡ್ (ಕಿಯೋಸ್ಕ್), ಅಲ್ಪಸಂಖ್ಯಾತ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸ್ವಯಂ ಉದ್ಯೋಗ ಪ್ರೋತ್ಸಾಹ, ಸಿಖ್ಖಲಿಗಾರ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕೆ ಪ್ರೋತ್ಸಾಹ, ಸಮುದಾಯ ಆಧಾರಿತ ತರಬೇತಿ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣಕ್ಕಾಗಿ ಸಾಲ, ವ್ಯಾಪಾರ/ಉದ್ದಿಮೆಗಳಿಗೆ ನೇರಸಾಲ ಹಾಗೂ ಸಾಂತ್ವನ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೌಲಾನಾ ಆಜಾದ್ ಅಲ್ಪಸಂಖ್ಯಾತರ ಭವನ, 1ನೇ ಮಹಡಿ, ಜಿಲ್ಲಾ ನ್ಯಾಯಾಲಯದ ಎದುರು, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿನ ಕಚೇರಿಯನ್ನು ಅಥವಾ 08372-295147, 8277944217 ದೂರವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ರಕ್ಷಿಸಿ, ದೇಶದ ಅಭಿವೃದ್ಧಿಗೆ ಶ್ರಮಿಸಲು ಮೌಲಾನಾ ಆರೀಫ್ ಸಾಬ್ ಕರೆ

# ಸೌಹಾರ್ದದ ಸಂದೇಶ ಸಾರಿದ ಈದ್ ಮಿಲಾದ್



**ವಿಜಯಸಾಕ್ಷಿ ಸುದ್ದಿ, ಗದಗ**

ಎಲ್ಲ ಧರ್ಮಗಳ ಜನರು ಪರಸ್ಪರ ಗೌರವ ಹಾಗೂ ಸಹೋದರತ್ವದಿಂದ ಒಂದಾಗಿ ಸಾಗಿದಾಗ ಮಾತ್ರ ರಾಷ್ಟ್ರದ ಸಮಗ್ರ ಪ್ರಗತಿ ಸಾಧ್ಯ. ದೇಶಪ್ರೇಮ ಮತ್ತು ಸಂವಿಧಾನದ ರಕ್ಷಣೆ ಇಸ್ಲಾಂ ಧರ್ಮದ ಪ್ರಮುಖ ಆಶಯಗಳಾಗಿದ್ದು, ದ್ವೇಷ-ವೈಷಮ್ಯ ಬದಿಗೊತ್ತಿ ದೇಶದ ಏಳಿಗೆಗೆ ಶ್ರಮಿಸಬೇಕು ಎಂದು ಬೆಳಗಾವಿಯ ಜಮಿಯತೆ ಉಲ್ಮಾ ಜಿಲ್ಲಾ ಕಾರ್ಯದರ್ಶಿ ಹಜರತ್ ಮೌಲಾನಾ ಮಹಮ್ಮದ್ ಆರೀಫ್ ಸಾಬ್ ಇನಾಮಿ ಹೇಳಿದರು.

ನಗರದ ಉರ್ದು ಸೆಂಟ್ರಲ್ ಶಾಲೆ ಆವರಣದಲ್ಲಿ ಗದಗಬೆಟಗೇರಿ ಈದ್ ಮಿಲಾದ್ ಕಮಿಟಿ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಹಜರತ್ ಮಹಮ್ಮದ್ ಪೈಗಂಬರ್ ಜಯಂತ್ಯುತ್ಸವದಲ್ಲಿ ಪಾಲ್ಗೊಂಡ ಅವರು ಉಪನ್ಯಾಸ ನೀಡಿದರು.

ಮಾನವ ಕಲ್ಯಾಣಕ್ಕಾಗಿ ಬದುಕಿದ ಪೈಗಂಬರ್ ಮಹಮ್ಮದ ಅವರು ಪ್ರೀತಿ, ಕ್ಷಮೆ, ಸಹನೆ ಮತ್ತು ಕರುಣೆಯ ಹಾದಿ ತೋರಿಸಿದ್ದಾರೆ. ವಿರೋಧಿಗಳನ್ನೂ ದ್ವೇಷಿಸದೆ ಮಾನವೀಯತೆಯಿಂದ ಕಾಣಬೇಕು ಎಂಬ ಅವರ ಸಂದೇಶ ಸಾರ್ವಕಾಲಿಕವಾದದ್ದು. ಹೀಗಾಗಿ ಅವರ ಜನ್ಮದಿನದ ಆಚರಣೆ ಕೇವಲ ಸಂಪ್ರದಾಯವಾಗದೆ, ಆದರ್ಶಗಳ ಅನುಷ್ಠಾನಕ್ಕೆ ಪ್ರೇರಣೆಯಾಗಬೇಕು ಎಂದರು. ಬಡವರು, ನಿರ್ಗತಿಕರು ಹಾಗೂ ಸಂಕಷ್ಟದಲ್ಲಿರುವವರ ನೆರವಿಗೆ ಧಾವಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಪೈಗಂಬರ್ ಅವರ ತತ್ವಗಳನ್ನು ಅಳವಡಿಸಿಕೊಂಡರೆ ವೈಯಕ್ತಿಕ ಬದುಕಿನಲ್ಲೂ ಶಾಂತಿ ನೆಲೆಸುವುದರ ಜತೆಗೆ ಸಮಾಜದಲ್ಲಿ ಸಕಾರಾತ್ಮಕ ವಾತಾವರಣ ನಿರ್ಮಾಣವಾಗಲಿದೆ. ಜಗತ್ತಿನ ಶಾಂತಿಗಾಗಿ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

**ಡಿ.ಜೆ.ಗೆ ಅವಕಾಶ ನೀಡದೆ ಈ ಬಾರಿ ಆಚರಣೆಯನ್ನು ಅರ್ಥಪೂರ್ಣಗೊಳಿಸಿರುವುದು ವಿಶೇಷ. 150 ಮಂದಿಯ ಕಣ್ಣು ತಪಾಸಣೆ ಹಾಗೂ 50 ಜನರಿಗೆ ನೇತ್ರ ಶಸ್ತ್ರಚಿಕಿತ್ಸೆ ಮಾಡಿಸಿರುವುದು ಸಮಾಜಮುಖಿ ಕಾಳಜಿಗೆ ಸಾಕ್ಷಿಯಾಗಿದೆ.**

**- ಅಕ್ಬರ್‌ಸಾಬ್ ಬಬರ್ಚಿ,** ಅಧ್ಯಕ್ಷ,
ಗದಗಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ

**ಭಕ್ತಿಸಡಗರದ ಮೆರವಣಿಗೆ:** ಹಬ್ಬದ ಅಂಗವಾಗಿ ನಗರದ ವಿವಿಧ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ ನೆರವೇರಿಸಲಾಯಿತು. ಬಳಿಕ ಪ್ರಮುಖ ರಸ್ತೆಗಳಲ್ಲಿ ನಡೆದ ಮೆರವಣಿಗೆಯಲ್ಲಿ ಮಕ್ಕಳು, ಯುವಕರು ಹಾಗೂ ಹಿರಿಯರು ಉತ್ಸಾಹದಿಂದ ಪಾಲ್ಗೊಂಡರು. ಬಾವುಟಗಳನ್ನು ಹಿಡಿದು ಸಾಗಿದ ಜನರು ಧಾರ್ಮಿಕ ಘೋಷಣೆಗಳನ್ನು ಮೊಳಗಿಸಿದರು. ಮೆರವಣಿಗೆಯ ಮಾರ್ಗದಲ್ಲಿ ಸಾರ್ವಜನಿಕರಿಗೆ ಸಿಹಿತಿನಿಸು ಹಾಗೂ ತಂಪು ಪಾನೀಯ ವಿತರಿಸಲಾಯಿತು.

ಉರ್ದು ಸೆಂಟ್ರಲ್ ಶಾಲೆ ಆವರಣದ ಕಾರ್ಯಕ್ರಮದ ವೇದಿಕೆಯವರೆಗೆ ಸಾಗಿದ ಮೆರವಣಿಗೆಯಲ್ಲಿ ನಿರ್ಮಿಸಿದ್ದ ಮೆಕ್ಕಾ ಮಾದರಿ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ರೋಣದ ಬಾಲಕಿ ಇಕ್ರಾನಾಜ್ ರಚಿಸಿರುವ ಆರು ಪುಸ್ತಕಗಳನ್ನು ಲೋಕಾರ್ಪಣೆ ಮಾಡಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಸನ್ಮಾನಿಸಲಾಯಿತು. ನಗರದ ಮಸೀದಿಗಳ ಮುಖ್ಯಸ್ಥರನ್ನೂ ಗೌರವಿಸಲಾಯಿತು.

ಜಮಿಯತೆ ಉಲ್ಮಾ ಕಮಿಟಿ ಅಧ್ಯಕ್ಷ ಅಕ್ಬರ್ ಸಾಬ್ ಪಿರಜಾದೆ, ಈದ್ ಮಿಲಾದ್ ಕಮಿಟಿ ಅಧ್ಯಕ್ಷ ಆಸೀಫ್ ಜಿ. ದಂಡಿನ, ಯೂಸುಫ್ ಡಂಬಳ, ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಎಂ.ಎಂ. ಮಾಳೆಕೊಪ್ಪ, ಡಾ. ನಿಜಾಮುದ್ದೀನ್ ಅತ್ತಾರ್, ಜೀವನಸಾಬ್ ನಮಾಜಿ, ಡಾ. ಪ್ಯಾರಾ ಅಲಿ ನೂರಾನಿ, ವಿನಾಯಕ ಬಳ್ಳಾರಿ, ಬಸವರಾಜ ಕಡೇಮನಿ, ಎಂ.ಸಿ. ಶೇಖ್, ಅನ್ವರ್‌ಸಾಬ್ ಬಳ್ಳಾರಿ, ಪೀರ್‌ಸಾಬ್ ಕೌತಾಳ, ಖಾಜಿ, ಪೆಂಡಾರಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

### ಆಚರಣೆಗೆ ಸಮಾಜ ಸೇವೆಯ ಸ್ಪರ್ಶ

**ಧಾರ್ಮಿಕ ಕಾರ್ಯಕ್ರಮದ ಜತೆಗೆ ಆರೋಗ್ಯ, ಶಿಕ್ಷಣ ಮತ್ತು ಪ್ರತಿಭಾ ಪ್ರೋತ್ಸಾಹಕ್ಕೆ ಒತ್ತು ನೀಡಲಾಯಿತು. ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ, ಬಾಲಕಿ ಇಕ್ರಾನಾಜ್‌ಳ ಆರು ಕೃತಿಗಳ ಬಿಡುಗಡೆ, ವಿದ್ಯಾರ್ಥಿಗಳ ಅಭಿನಂದನೆ ಮತ್ತು ಮಸೀದಿ ಮುಖ್ಯಸ್ಥರ ಗೌರವ ಸಮಾರಂಭಕ್ಕೆ ವಿಶೇಷ ಮೆರುಗು ನೀಡಿದವು.**

# ಹಗರಿಬೊಮ್ಮನಹಳ್ಳಿಯಲ್ಲಿ ಈದ್ ಮಿಲಾದ್ ಸಂಭ್ರಮ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪ್ರವಾದಿ ಹಜರತ್ ಮಹಮ್ಮದ್ ಅವರ ಜನ್ಮದಿನದ ಸ್ಮರಣಾರ್ಥ ಆಚರಿಸುವ ಈದ್ ಮಿಲಾದ್-ಉನ್-ನಬಿ ಹಬ್ಬವನ್ನು ಪಟ್ಟಣದಲ್ಲಿ ಮುಸ್ಲಿಂ ಬಾಂಧವರು ಬುಧವಾರ ಸಡಗರ, ಸಂಭ್ರಮ ಹಾಗೂ ಭಕ್ತಿಭಾವದಿಂದ ಆಚರಿಸಿದರು.


ಹಬ್ಬದ ಅಂಗವಾಗಿ ಪಟ್ಟಣದಲ್ಲಿ ಅದ್ದೂರಿ ಧಾರ್ಮಿಕ ಮೆರವಣಿಗೆ ನಡೆಯಿತು. ರಾಮನಗರ, ಅರಳಿಹಳ್ಳಿ, ಬಸವೇಶ್ವರ ಬಜಾರ್, ಹಳೆ ಊರು, ಜಾಲೀನಗರ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಮುಸ್ಲಿಂ ಸಮಾಜದ ಬಾಂಧವರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಮಕ್ಕಳು, ಯುವಕರು ಹಾಗೂ ಸಮಾಜದ ಮುಖಂಡರು ಪ್ರವಾದಿಯ ಸಂದೇಶ ಸಾರುವ ಘೋಷಣೆಗಳನ್ನು ಮೊಳಗಿಸುತ್ತ ಸಾಗಿದರು. ಪ್ರವಾದಿ ಮಹಮ್ಮದ್ ಅವರು ಸಾರಿದ ಸಮಾನತೆ, ಶಾಂತಿ, ಸಹೋದರತ್ವ ಹಾಗೂ ಮಾನವೀಯತೆಯ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ. ಅವರ ಜೀವನಾದರ್ಶಗಳನ್ನು ಸ್ಮರಿಸುತ್ತ ಈದ್ ಮಿಲಾದ್ ಆಚರಿಸುವುದು ವಿಶೇಷವಾಗಿದೆ ಎಂದು ಸಮಾಜದ ಮುಖಂಡರು ತಿಳಿಸಿದರು.

ಮೆರವಣಿಗೆಯಲ್ಲಿ ಮಾಜಿ ಶಾಸಕ ಎಸ್. ಭೀಮ ನಾಯ್ಕ್, ಜಿಲ್ಲಾ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ಡಾ. ಸಾಹಿರಾಬಾನು, ಪುರಸಭೆ ಸದಸ್ಯೆ ರೇಷ್ಮಾ ಶಿಖಂದರ್, ತೆಲಿಗಿ ನೆಲ ಇಸ್ಮಾಯಿಲ್ ಸಾಹೇಬ್, ಬಶೀರ್ ಸಾಹೇಬ್, ಎಣ್ಣೆ ಭಾಷಾ, ದಾದಾ ಕಲಂದರ್, ಜಂದಿ ಸಾಹೇಬ್, ನೂರು ಮಹಮ್ಮದ್ ಅಬ್ಬು, ನೂರಿ, ಗುಲ್ಜರ್, ದಾದಾಪೀರ್, ಕೆಜಿಎನ್ ಅಲ್ಲಾಭಕ್ಷಿ, ದಾದು ತತ್ತಿ ಕಾಶಿಂ, ಜಿನ್ನ ಸಾಹೇಬ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ನೂರಾರು ಮಂದಿ ಪಾಲ್ಗೊಂಡಿದ್ದರು.

## ಗ್ರಾಹಕರ ಹಿತದ ಜತೆಗೆ ಬೆಳೆಗಾರರ ಸಂಕಷ್ಟಕ್ಕೂ ಸ್ಪಂದಿಸಿ

# ಈರುಳ್ಳಿ ಬೆಲೆ ನಿಯಂತ್ರಣಕ್ಕೆ ರೈತರ ವಿರೋಧ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಈರುಳ್ಳಿ ಬೆಲೆ ಏರಿಕೆಯಾಗುವ ಮುನ್ನವೇ ನಿಯಂತ್ರಿಸಲು ಕೇಂದ್ರ ಸರ್ಕಾರ ಮುಂದಾಗಿರುವುದು ಗ್ರಾಹಕರ ಹಿತದೃಷ್ಟಿಯಿಂದ ಸರಿಯಾದ ಕ್ರಮವಾದರೂ, ಹಲವು ವರ್ಷಗಳಿಂದ ಅತಿವೃಷ್ಟಿ, ಅನಾವೃಷ್ಟಿ, ರೋಗಬಾಧೆ ಹಾಗೂ ಬೆಲೆ ಕುಸಿತದಿಂದ ನಷ್ಟ ಅನುಭವಿಸುತ್ತಿರುವ ಈರುಳ್ಳಿ ಬೆಳೆಗಾರರ ಹಿತವನ್ನೂ ಸರ್ಕಾರ ಗಮನಿಸಬೇಕು ಎಂದು ಪ್ರಗತಿಪರ ರೈತ ಸೋಮನಗೌಡ ಪಾಟೀಲ ಆಗ್ರಹಿಸಿದ್ದಾರೆ.

ನಾಸಿಕ್‌ನಿಂದ ರೈಲುಗಳ ಮೂಲಕ ದೇಶದ ಪ್ರಮುಖ ನಗರಗಳಿಗೆ 800 ಮೆಟ್ರಿಕ್ ಟನ್ ಈರುಳ್ಳಿ ಪೂರೈಸಿ, ಬಫರ್ ದಾಸ್ತಾನಿನ ಈರುಳ್ಳಿಯನ್ನು ಕೆ.ಜಿ.ಗೆ ₹35ರಂತೆ ಏಜೆನ್ಸಿಗಳ ಮೂಲಕ ಮಾರಾಟ ಮಾಡಲು ಕೇಂದ್ರ ಸರ್ಕಾರ ಕೈಗೊಂಡಿರುವ ಕ್ರಮ ರೈತರಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪ್ರಸಕ್ತ ವರ್ಷ ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದು, ಬೆಳೆ ಸಮೀಕ್ಷೆ ಹಾಗೂ ಬರ ಘೋಷಣೆಯಲ್ಲೂ ವಿಳಂಬವಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ರೈತರು ಹರಸಾಹಸಪಟ್ಟು ಉಳಿಸಿಕೊಂಡಿರುವ ಬೆಳೆಗೆ ಯೋಗ್ಯ ಬೆಲೆ ದೊರೆಯುವಂತೆ ಮಾಡುವುದು ಸರ್ಕಾರದ ಆದ್ಯತೆಯಾಗಬೇಕು. ಬೆಲೆ ನಿಯಂತ್ರಣದ ಕ್ರಮಗಳಿಂದ ರೈತರಿಗೆ ದೊರೆಯುತ್ತಿರುವ ಅಲ್ಪ ಆದಾಯಕ್ಕೂ ಧಕ್ಕೆ ತರಬಾರದು ಎಂದು ಒತ್ತಾಯಿಸಿದ್ದಾರೆ.

ಬೆಲೆ ಏರಿಕೆಯಾದಾಗ ಗ್ರಾಹಕರ ರಕ್ಷಣೆಗೆ ತಕ್ಷಣ ಕ್ರಮ ಕೈಗೊಳ್ಳುವ ಸರ್ಕಾರ, ಬೆಲೆ ಕುಸಿದಾಗ ರೈತರ ನೆರವಿಗೂ ಇದೇ ರೀತಿಯ ಮುನ್ನೆಚ್ಚರಿಕೆ ವಹಿಸಬೇಕು. ಹಲವು ವರ್ಷಗಳ ನಷ್ಟದ ಬಳಿಕ ಈ ಬಾರಿ ದೊರೆಯುತ್ತಿರುವ ಉತ್ತಮ ಬೆಲೆ ರೈತರಿಗೆ ಕೊಂಚ ನೆಮ್ಮದಿ ನೀಡಿದೆ. ಅದಕ್ಕೂ ಬೆಲೆ ನಿಯಂತ್ರಣದ ಹೆಸರಿನಲ್ಲಿ ಧಕ್ಕೆ ತರಬಾರದು ಎಂದು ಸೋಮನಗೌಡ ಪಾಟೀಲ ಹೇಳಿದ್ದಾರೆ.

ಈರುಳ್ಳಿ ಬೆಳೆಗಾರರಿಗೆ ಯೋಗ್ಯ ಬೆಲೆ, ಬೆಳೆ ವಿಮೆ, ಬೆಂಬಲ ಬೆಲೆ ಹಾಗೂ ವೈಜ್ಞಾನಿಕ ಸಂಗ್ರಹಣಾ ವ್ಯವಸ್ಥೆ ಕಲ್ಪಿಸಬೇಕು. ಮಳೆ ಕೊರತೆಯಿಂದ ಹಾನಿಗೊಳಗಾದ ಪ್ರದೇಶಗಳನ್ನು ವೈಜ್ಞಾನಿಕವಾಗಿ ಗುರುತಿಸಿ, ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಸಂಸದರಾದ ಪ್ರಹ್ಲಾದ ಜೋಶಿ ಹಾಗೂ ಬಸವರಾಜ ಬೊಮ್ಮಾಯಿ ಅವರು ಕೇಂದ್ರ ಸರ್ಕಾರದ ಗಮನ ಸೆಳೆದು ರೈತರ ಪರ ಧ್ವನಿ ಎತ್ತಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಈರುಳ್ಳಿ ದೊರೆಯುವುದರ ಜತೆಗೆ ಬೆಳೆಗಾರರಿಗೂ ನ್ಯಾಯಯುತ ಬೆಲೆ ಸಿಗುವಂತಹ ಸಮತೋಲನದ ನೀತಿಯನ್ನು ಸರ್ಕಾರ ರೂಪಿಸಬೇಕು ಎಂದು ಸೋಮನಗೌಡ ಪಾಟೀಲ ಒತ್ತಾಯಿಸಿದ್ದಾರೆ.

## ಈದ್ ಮಿಲಾದ್: ಡಂಬಳದಲ್ಲಿ ಸಂಭ್ರಮದ ಮೆರವಣಿಗೆ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಪ್ರವಾದಿ ಹಜರತ್ ಮುಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಗ್ರಾಮದಲ್ಲಿ ಬುಧವಾರ ಈದ್ ಮಿಲಾದ್ ಆಚರಣೆ ಹಾಗೂ ಧಾರ್ಮಿಕ ಮೆರವಣಿಗೆ ಶ್ರದ್ಧಾಭಕ್ತಿ ಮತ್ತು ಸಂಭ್ರಮದಿಂದ ನಡೆಯಿತು.

ಗ್ರಾಮದ ಜುಮ್ಮಾ ಮಸೀದಿಯಿಂದ ಆರಂಭಗೊಂಡ ಮೆರವಣಿಗೆಗೆ ಧರ್ಮಗುರುಗಳು ಹಾಗೂ ಸಮಾಜದ ಮುಖಂಡರು ಚಾಲನೆ ನೀಡಿದರು. ಮೆರವಣಿಗೆಯಲ್ಲಿ ನೂರಾರು ಮುಸ್ಲಿಂ ಬಾಂಧವರು, ಯುವಕರು ಹಾಗೂ ಮಕ್ಕಳು ಪಾಲ್ಗೊಂಡು ಪ್ರವಾದಿಯ ಸಂದೇಶಗಳನ್ನು ಸಾರಿದರು. ಪ್ರವಾದಿ ಮುಹಮ್ಮದ್ ಅವರು ಜಗತ್ತಿಗೆ ಶಾಂತಿ, ಸೌಹಾರ್ದತೆ ಹಾಗೂ ಮಾನವೀಯತೆಯ ಸಂದೇಶ ಸಾರಿದರು. ಸಮಾಜದಲ್ಲಿ ಶಾಂತಿ ನೆಲೆಸಬೇಕು ಎಂಬುದೇ ಅವರ ಆಶಯವಾಗಿತ್ತು. ಅವರ ಜೀವನದ ಮೌಲ್ಯಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಧರ್ಮಗುರು ಖಾದರಸಾಬ ಮುಲ್ಲಾ ಹೇಳಿದರು.

ಮುಂಜಾನೆ ಆರಂಭವಾದ ಮೆರವಣಿಗೆ ಬೆಳಗ್ಗೆ 11.30ರವರೆಗೆ ನಡೆಯಿತು. ಮಾರ್ಗದುದ್ದಕ್ಕೂ ಪ್ರವಾದಿ ಮುಹಮ್ಮದ್ ಅವರ ಪರ ಘೋಷಣೆಗಳು ಮೊಳಗಿದವು. ವಿವಿಧ ಸಂಘ-ಸಂಸ್ಥೆಗಳ ವತಿಯಿಂದ ಜಮಾಲಶಾವಲಿ ಶರಣರ ದರ್ಗಾ ಬಳಿ ಭಕ್ತರಿಗೆ ಗಂಜಿ ಹಾಗೂ ಬಾಳೆಹಣ್ಣು ವಿತರಿಸಲಾಯಿತು.

ದೇಶದ ಪ್ರಗತಿ, ಎಲ್ಲ ಧರ್ಮಗಳ ಜನರ ಶ್ರೇಯಸ್ಸು ಹಾಗೂ ಗ್ರಾಮದಲ್ಲಿ ಉತ್ತಮ ಮಳೆ-ಬೆಳೆಗಾಗಿ ಮಸೀದಿ ಮತ್ತು ದರ್ಗಾಗಳಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಮೆರವಣಿಗೆ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಸೂಕ್ತ ಬಂದೋಬಸ್ತ್ ಕಲ್ಪಿಸಿದ್ದರು.

ಈ ಸಂದರ್ಭದಲ್ಲಿ ಧರ್ಮಗುರುಗಳಾದ ಬಶೀರಹಮ್ಮದ ತಾಂಬೋಟಿ, ಖಾಜಾಹುಸೇನ ಹೊಸಪೇಟಿ, ಬಾಬುಸಾಬ ಮೂಲಿಮನಿ, ಜಾಕೀರ ಮೂಲಿಮನಿ, ಹುಸೇನಸಾಬ ದೊಡ್ಡಮನಿ, ಇಂಮತ್ಯಾಜ ದಪೇದಾರ, ಹುಸೇನಸಾಬ ಹೊಸಬಾವಿ, ಮುನ್ನಾ ನದಾಫ್, ಹಜರತಲಿ ಹೊಂಬಳ, ಇಮಾಮ ಹೊಂಬಳ, ರಫೀಕ ಮನಿಯಾರ, ರಜಾಕಸಾಬ ತಾಂಬೋಟಿ, ಶಫೀಕ ಮೂಲಿಮನಿ, ಬುಡ್ನೆಸಾಬ ಅತ್ತಾರ, ಮೋದಿನಸಾಬ ಚಾಂದಖಾನವರ, ಮೀರಾಸಾಬ ದೊಡ್ಡಮನಿ, ಮಹಮ್ಮದಗೌಸ ಅತ್ತಾರ, ನಜೀರ ಸರಕಾವಾಸ್, ಮುರ್ತುಜಾ ಮನಿಯಾರ, ರಾಯಸಾಬ ಹಳ್ಳಿಕೇರಿ, ಗೌಸುಸಾಬ ಆಲೂರ, ಡಿ.ಡಿ. ಸೊರಟೂರ ಸೇರಿದಂತೆ ಮುಸ್ಲಿಂ ಸಮಾಜದ ಹಿರಿಯರು, ಯುವಕರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

## ಪ್ರಾದೇಶಿಕ ಅಸಮಾನತೆ ನಿವಾರಣೆ, ಮೂಲಸೌಕರ್ಯಕ್ಕೆ ಆದ್ಯತೆ ನೀಡಲು ಆಗ್ರಹ

# ಉ.ಕ.ದ ಅಭಿವೃದ್ಧಿಗೆ ಬೆಂಗಳೂರಿನಲ್ಲಿ ಮೊಳಗಿದ 15 ಜಿಲ್ಲೆಗಳ ಧ್ವನಿ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಉತ್ತರ ಕರ್ನಾಟಕದ 15 ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಹಾಗೂ ಪ್ರಾದೇಶಿಕ ಅಸಮಾನತೆ ನಿವಾರಣೆಗೆ ಒತ್ತಾಯಿಸಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಸೋಮವಾರ ನಡೆದ ಸಮಾವೇಶದಲ್ಲಿ ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳ ಪ್ರತಿನಿಧಿಗಳು ಒಗ್ಗೂಡಿ ಧ್ವನಿ ಮೊಳಗಿಸಿದರು.

ಗದಗ ಜಿಲ್ಲೆಯಿಂದ ಕಪ್ಪತ್ತಗಿರಿ ಫೌಂಡೇಶನ್‌ನ ಪದಾಧಿಕಾರಿಗಳು ಸಕ್ರಿಯವಾಗಿ ಭಾಗವಹಿಸಿ ಜಿಲ್ಲೆಯ ಪರವಾಗಿ ಪ್ರತಿನಿಧಿಸಿದರು.

ಉತ್ತರ ಕರ್ನಾಟಕ ಹೋರಾಟ ಸಮಿತಿಯ ಕಾರ್ಯದರ್ಶಿ ನಾಗೇಂದ್ರ, ಗೋಲಶೆಟ್ಟಿ ಅವರ ಮುಂದಾಳತ್ವದಲ್ಲಿ ನಡೆದ ಸಮಾವೇಶದಲ್ಲಿ ಉತ್ತರ ಕರ್ನಾಟಕದ ಜಿಲ್ಲೆಗಳು ಎದುರಿಸುತ್ತಿರುವ ಅಭಿವೃದ್ಧಿ ಹಿನ್ನಡೆ, ಆಡಳಿತಾತ್ಮಕ ಸಮಸ್ಯೆಗಳು ಹಾಗೂ ಜನರ ಪ್ರಮುಖ ಬೇಡಿಕೆಗಳ ಕುರಿತು ಸರ್ಕಾರದ ಗಮನ ಸೆಳೆಯಲಾಯಿತು.






ಪ್ರಾದೇಶಿಕ ಅಸಮಾನತೆ ನಿವಾರಣೆ, ಮೂಲಸೌಕರ್ಯಗಳ ಸುಧಾರಣೆ, ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಆದ್ಯತೆ ನೀಡಬೇಕು. ಈ ಭಾಗದ ಅಭಿವೃದ್ಧಿಗೆ ಸರ್ಕಾರ ವಿಶೇಷ ಗಮನಹರಿಸುವ ಮೂಲಕ ಸಮಗ್ರ ಅಭಿವೃದ್ಧಿಗೆ ವೇಗ ನೀಡಬೇಕು ಎಂದು ಸಮಾವೇಶದಲ್ಲಿ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಕಪ್ಪತ್ತಗಿರಿ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷೆ ಚಂದ್ರಕಲಾ ಮ. ಇಟಗಿಮಠ, ಅವ್ವ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷೆ ಹಾಗೂ ಕಪ್ಪತ್ತಗಿರಿ ಫೌಂಡೇಶನ್ ನರಗುಂದ ತಾಲೂಕು ಅಧ್ಯಕ್ಷೆ ಮಾಲಾ ಪಾಟೀಲ, ಕಪ್ಪತ್ತಗಿರಿ ಫೌಂಡೇಶನ್ ರಾಜ್ಯ ಮಾಧ್ಯಮ ಸಲಹೆಗಾರ ರಮೇಶ್ ನಾಯಕ ಹಾಗೂ ರಾಜ್ಯ ಕಾರ್ಯದರ್ಶಿ ತೋಟಯ್ಯ ಗುಡ್ಡಿಮಠ ಅವರು ಭಾಗವಹಿಸಿ ಗದಗ ಜಿಲ್ಲೆಯನ್ನು ಪ್ರತಿನಿಧಿಸಿದರು.

ಉತ್ತರ ಕರ್ನಾಟಕದ ಅಭಿವೃದ್ಧಿ ಎನ್ನುವುದು ಕೇವಲ ಒಂದು ಪ್ರದೇಶದ ಬೇಡಿಕೆಯಲ್ಲ. ಇದು ಸಮಗ್ರ ಕರ್ನಾಟಕದ ಅಭಿವೃದ್ಧಿಯ ಅವಿಭಾಜ್ಯ ಭಾಗವಾಗಿದೆ.

### ಒಗ್ಗಟ್ಟಿನ ಧ್ವನಿ

ಉತ್ತರ ಕರ್ನಾಟಕದ ಅಭಿವೃದ್ಧಿಯ ಪ್ರಶ್ನೆಯನ್ನು ರಾಜ್ಯಮಟ್ಟದಲ್ಲಿ ಪರಿಣಾಮಕಾರಿಯಾಗಿ ಮುನ್ನೆಲೆಗೆ ತರುವ ನಿಟ್ಟಿನಲ್ಲಿ 15 ಜಿಲ್ಲೆಗಳ ಪ್ರತಿನಿಧಿಗಳ ಒಗ್ಗಟ್ಟಿನ ಭಾಗವಹಿಸುವಿಕೆ ಮಹತ್ವ ಪಡೆದಿದೆ. ಗದಗ ಜಿಲ್ಲೆಯಿಂದ ಕಪ್ಪತ್ತಗಿರಿ ಫೌಂಡೇಶನ್‌ನ ಪದಾಧಿಕಾರಿಗಳ ಸಕ್ರಿಯ ಪಾಲ್ಗೊಳ್ಳುವಿಕೆ ಜಿಲ್ಲೆಯ ಸಾಮಾಜಿಕ ಕಳಕಳಿ ಹಾಗೂ ಪ್ರಾದೇಶಿಕ ಅಭಿವೃದ್ಧಿಯ ಬದ್ಧತೆಯನ್ನು ಬಿಂಬಿಸಿತು.

ಈ ಭಾಗದ ಜನರ ನ್ಯಾಯಯುತ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸಿ ಅಭಿವೃದ್ಧಿಗೆ ಅಗತ್ಯವಾದ ಆದ್ಯತೆ ನೀಡಬೇಕು ಎಂದು ಸಮಾವೇಶದಲ್ಲಿ ಪ್ರತಿನಿಧಿಗಳು ಒತ್ತಾಯಿಸಿದರು.

# ವಚನಗಳು ಸಾಹಿತ್ಯವಲ್ಲ; ಬದುಕಿನ ದರ್ಶನ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಚನಗಳು ಕೇವಲ ಸಾಹಿತ್ಯವಲ್ಲ, ಸಮಾನತೆ, ಕಾಯಕ, ದಾಸೋಹ, ಸತ್ಯ ಹಾಗೂ ಮಾನವೀಯ ಮೌಲ್ಯಗಳನ್ನು ಸಾರುವ ಜೀವನದರ್ಶನವಾಗಿವೆ ಎಂದು ಗದಗದ ಪ್ರೊ. ಎಸ್.ಯು. ಸಜ್ಜನಶೆಟ್ಟರ ಹೇಳಿದರು. ತಾಲೂಕಿನ ಗೊಜನೂರ ಗ್ರಾಮದೇವತೆ ದೇವಸ್ಥಾನದ ಸಮುದಾಯ ಭವನದಲ್ಲಿ ಬಸವ ದಳ, ಬಸವ ಕೇಂದ್ರ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘ, ಗದಗಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ ಭಾನುವಾರ ನಡೆದ ವಚನ ಶ್ರಾವಣ2026 ಕಾರ್ಯಕ್ರಮದಲ್ಲಿ ಬಸವಣ್ಣನವರ ವಚನಗಳ ಕುರಿತು ಅವರು ಚಿಂತನೆ ನಡೆಸಿದರು. ಶರಣರ ವಚನಗಳು ಅನುಭವ ಮಂಟಪದಲ್ಲಿ ನಡೆದ ಚಿಂತನೆ ಹಾಗೂ ಅನುಭಾವದ ಫಲ. ಬಸವಣ್ಣನವರು ಜಾತಿ, ಮೇಲು-ಕೀಳು ಹಾಗೂ ಸಾಮಾಜಿಕ ಅಸಮಾನತೆಯನ್ನು ವಿರೋಧಿಸಿ, ಶೋಷಿತರು ಮತ್ತು ದುರ್ಬಲರಿಗೆ ಗೌರವಯುತ ಬದುಕಿನ ಅವಕಾಶ ಕಲ್ಪಿಸಿದರು. ರೈತ ಬೆಳೆದ ಉತ್ಪನ್ನ ಖರೀದಿಸುವಾಗ ಜಾತಿ ಕೇಳದವರು, ಪಂಕ್ತಿಯಲ್ಲಿ ಊಟ ಮಾಡುವಾಗ ಜಾತಿ ವಿಚಾರಿಸುವುದು ಸಮಾಜದ ದ್ವಂದ್ವ ಮನೋಭಾವಕ್ಕೆ ಉದಾಹರಣೆಯಾಗಿದೆ. ಶರಣರ ಆಶಯದಲ್ಲಿ ಇಷ್ಟಲಿಂಗ ಧರಿಸಿದವರಲ್ಲಿ ಜಾತಿಗೆ ಸ್ಥಾನವಿಲ್ಲ; ಸಮಾನತೆಯೇ ಪ್ರಧಾನ ಎಂದರು. ಒಳಗೊಂದು ಭಾವ, ಹೊರಗೊಂದು ಭಾವ ಇಟ್ಟುಕೊಂಡು ಡಾಂಭಿಕವಾಗಿ ಬದುಕದೆ ಅಂತರಂಗಬಹಿರಂಗ ಶುದ್ಧತೆಯನ್ನು ಕಾಪಾಡಿಕೊಳ್ಳಬೇಕು. ಮಕ್ಕಳಲ್ಲಿ ಶರಣರ ವಿಚಾರಧಾರೆ ಹಾಗೂ ಉತ್ತಮ ಸಂಸ್ಕಾರಗಳನ್ನು ಬೆಳೆಸುವ ಅಗತ್ಯವಿದೆ. ಸರಳತೆ, ಸತ್ಯ, ಕಾಯಕ, ದಾಸೋಹ ಹಾಗೂ ಅಂತರಂಗ ಶುದ್ಧತೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಗ್ರಾಮದ ಮಕ್ಕಳು ಬಸವಣ್ಣ, ಅಂಬಿಗರ ಚೌಡಯ್ಯ, ಅಕ್ಕಮಹಾದೇವಿ ಹಾಗೂ ಜೇಡರ ದಾಸಿಮಯ್ಯನವರ ವೇಷದಲ್ಲಿ ಭಾಗವಹಿಸಿ ಗಮನ ಸೆಳೆದರು. ಚನ್ನವೀರಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಪ್ರಕಾಶ ಅಸುಂಡಿ ಪ್ರಸ್ತಾವನೆ ಮಂಡಿಸಿದರು. ಚಂದ್ರಗೌಡ ಶೇಖರಗೌಡ ದೊಡ್ಡಗೌಡ್ರ, ಸ್ವಾಗತಿಸಿದರು. ಗೌರವಕ್ಕೆ ಬಡಿಗಣ್ಣವರ ವಂದಿಸಿದರು.

# ಕಪ್ಪತ್ತಗುಡ್ಡದ ಪರಿಸರ ಕವಿಗಳಿಗೆ ನವಚೈತನ್ಯ ನೀಡಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆಯ ಸಿಂಚನದ ನಡುವೆಯೇ ಕವಿಗಳು ಕವಿತೆಗಳನ್ನು ವಾಚಿಸುವ ಮೂಲಕ ಕಪ್ಪತ್ತಗುಡ್ಡದ ಪರಿಸರದಲ್ಲಿ ನಡೆದ ಜಿಲ್ಲಾ ಮಟ್ಟದ ಕವಿ ಸಮ್ಮೇಳನದ ಸಮಾರೋಪ ಸಮಾರಂಭ ಗಮನ ಸೆಳೆಯಿತು.

ಕವಿಗಳು ಜನಮಾನಸವನ್ನು ತಿದ್ದುವ ಶಕ್ತಿ ಹೊಂದಿದ್ದಾರೆ. ಸಾಹಿತ್ಯ ಕ್ಷೇತ್ರದಲ್ಲಿ ಕವಿಗಳಿಗೆ ಅಪಾರ ಮನ್ನಣೆ ಇದೆ.

ಕಪ್ಪತ್ತಗುಡ್ಡದ ಪರಿಸರ ಹೊಸ ಕವಿಗಳಿಗೆ ಬರವಣಿಗೆಯ ಚೈತನ್ಯ ಹಾಗೂ ಸ್ಫೂರ್ತಿ ನೀಡಲಿ ಎಂದು ಬಸವಬೆಟ್ಟ ಕಡಕೋಳ-ಕಪ್ಪತಗಿರಿಯ ಶರಣೆ ಓಂಕಾರೇಶ್ವರಿ ಮಾತಾಜಿ ಹೇಳಿದರು.

ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ವಿವಿಧ ತಾಲೂಕುಗಳ ಕನ್ನಡ ಸಾಹಿತ್ಯ ಪರಿಷತ್ತುಗಳ ಆಶ್ರಯದಲ್ಲಿ ಕಪ್ಪತ್ತಗುಡ್ಡದ ಸೆರಗಿನ ದೇವರೆಡ್ಡಿ ಅಗಸನಕೊಪ್ಪ ಕೃಷಿ ಆಶ್ರಮದಲ್ಲಿ ನಡೆದ ಜಿಲ್ಲಾ ಮಟ್ಟದ ಕವಿ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.



ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಸಮ್ಮೇಳನದಲ್ಲಿ ವಾಚಿಸಲಾದ ಕವಿತೆಗಳನ್ನು ಪುಸ್ತಕ ರೂಪದಲ್ಲಿ ಹೊರತರಲಾಗುವುದು. ಉತ್ತಮ ಕವಿತೆಗಳು ಅಧ್ಯಯನಶೀಲತೆಯಿಂದ ಮೂಡಿಬರುತ್ತವೆ. ಕಮ್ಮಟಗಳನ್ನು ಸಂಘಟಿಸುವ ಮೂಲಕ ಯುವ ಕವಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ದೇವರೆಡ್ಡಿ ಅಗಸನಕೊಪ್ಪ, ಬಸವರಾಜ ಪಲ್ಲೇದ ಮಾಗಡಿ, ಸಮ್ಮೇಳನ ಸಂಯೋಜಕರಾದ ಸುರೇಶ ಕುಂಬಾರ, ರಮಾಕಾಂತ ಕಮತಗಿ, ಪಿ.ಆರ್. ಹಿರೇಮಠ, ನಿಂಗಪ್ಪ ಮಾಚೇನಹಳ್ಳಿ, ಶರಣಪ್ಪ ಹರ್ಲಾಪೂರ, ಪ್ರಗತಿಪರ ರೈತರಾದ ಯಲ್ಲಪ್ಪ ನಾವಿ, ಕಡಕೋಳ ಹಾಗೂ ತಿಪ್ಪಣ್ಣ ಕೆಳಗಡೆ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ ರಾಷ್ಟ್ರಧ್ವಜಾರೋಹಣವನ್ನು ಸುಶೀಲಮ್ಮ ಅಗಸನಕೊಪ್ಪ, ನಾಡಧ್ವಜಾರೋಹಣವನ್ನು ಮಾಜಿ ಸಚಿವ ಎಸ್.ಎಸ್. ಪಾಟೀಲ ಕಲಕೇರಿ ಹಾಗೂ ಪರಿಷತ್ ಧ್ವಜಾರೋಹಣವನ್ನು ವಿವೇಕಾನಂದಗೌಡ ಪಾಟೀಲ ನೆರವೇರಿಸಿದರು. ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ಹಾಗೂ ಸಾಮರಸ್ಯ ನಡಿಗೆಯನ್ನು ನಂದಿವೇರಿಮಠದ ಶಿವಕುಮಾರಸ್ವಾಮಿಗಳ ಸಮ್ಮುಖದಲ್ಲಿ ಶ್ರೀ ಕಪ್ಪತ್ತಮಲ್ಲೇಶ್ವರ ತೋಟಗಾರಿಕೆ ರೈತ ಉತ್ಪಾದಕ ಕಂಪನಿ ಶಿರಹಟ್ಟಿ-ಕಡಕೋಳ ಅಧ್ಯಕ್ಷತಿಪ್ಪಣ್ಣ ಕೊಂಚಿಗೇರಿ ಉದ್ಘಾಟಿಸಿದರು.

ಕೆ.ಎ. ಬಳಿಗೇರ, ವೀರಣ್ಣ ಮಜ್ಜಗಿ, ರುದ್ರಣ್ಣ ಗುಳಗುಳಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ವಿವಿಧ ಕಲಾ ತಂಡಗಳಿಂದ ಕಲಾ ಪ್ರದರ್ಶನ ನಡೆಯಿತು.

## ಕೀಟ ನಿರ್ವಹಣೆಗೆ ಸಲಹೆ | ಬೆಳೆಹಾನಿ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವ ಭರವಸೆ

# ಈರುಳ್ಳಿ, ಮೆಣಸಿನಕಾಯಿ ಬೆಳೆಗೆ ರೋಗಬಾಧೆ

**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ತಿಮ್ಮಾಪುರ ಹಾಗೂ ಹರ್ಲಾಪೂರ ಭಾಗದಲ್ಲಿ ಈರುಳ್ಳಿ ಮತ್ತು ಮೆಣಸಿನಕಾಯಿ ಬೆಳೆಗಳಿಗೆ ಮುಟುಗಿ ರೋಗ, ಥ್ರಿಪ್ಸ್ ಹಾಗೂ ನುಸಿ ಕೀಟಗಳ ಬಾಧೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಹೊಲಗಳಿಗೆ ಭೇಟಿ ನೀಡಿ ಬೆಳೆಗಳನ್ನು ಪರಿಶೀಲಿಸಿದರು.

ಗದಗ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಮಂಜುನಾಥ ಕರೋಶಿ ಅವರು ರೈತರೊಂದಿಗೆ ಚಳರ್‌ಸಿ ರೋಗ ಹಾಗೂ ಕೀಟಗಳ ಸಮಗ್ರ ನಿರ್ವಹಣೆ ಕುರಿತು ಮಾಹಿತಿ ನೀಡಿದರು. ಥ್ರಿಪ್ಸ್ ಮತ್ತು ನುಸಿ ಕೀಟಗಳ ನಿಯಂತ್ರಣಕ್ಕೆ ಅಂಟು ಬಲೆ, ಬೇವಿನ ಎಣ್ಣೆ, ಜೈವಿಕ ಕೀಟನಾಶಕ ಹಾಗೂ ಶಿಫಾರಸು ಮಾಡಲಾದ ರಾಸಾಯನಿಕ ಕೀಟನಾಶಕಗಳನ್ನು ನಿಯಮಿತ ವಾಗಿ ಬದಲಾಯಿಸಿ ಸಿಂಪಡಿಸಬೇಕು. ಔಷಧ ಸಿಂಪಡಿಸುವಾಗ ದ್ರಾವಣವು ಎಲೆಗಳ ಕೆಳಭಾಗಕ್ಕೂ ತಲುಪುವಂತೆ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.



ಮಳೆ ಕೊರತೆಯಿಂದ ಕೆಲವು ಕಡೆ ಬೆಳೆಗಳು ಮೊಳಕೆ ಹಂತದಲ್ಲೇ ಕಮರಿ ನಾಶವಾಗುತ್ತಿರುವುದನ್ನು ಅಧಿಕಾರಿಗಳು ಪರಿಶೀಲಿಸಿದರು. ಶೀಘ್ರದಲ್ಲಿ ಸಮಗ್ರ ಸಮೀಕ್ಷೆ ನಡೆಸಿ ಬೆಳೆಹಾನಿ ವರದಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಮಂಜುನಾಥ ಕರೋಶಿ ರೈತರಿಗೆ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಮಾತನಾಡಿ, ಸಾವಿರಾರು ರೂಪಾಯಿ ಖರ್ಚು ಮಾಡಿ ಬಿತ್ತನೆ ಮಾಡಿರುವ ಬೆಳೆಗಳು ರೈತರ ಕಣ್ಣೆದುರೇ ನಾಶವಾಗುತ್ತಿವೆ. ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ರೈತರಿಗೆ ಪರಿಹಾರ ಹಾಗೂ ಬೆಳೆ ವಿಮೆ ದೊರಕಿಸಿಕೊಡಬೇಕು ಎಂದು ಒತ್ತಾಯಿಸಿದರು.

ಶಿವಾನಂದ ಬಾನಿ, ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ, ವೆಂಕಟೇಶ ಸತ್ಯಪ್ಪನವರ, ಕೀರಣ ಜೋಗಿನ, ಫಕೀರಪ್ಪ ಹಂಚಿನಾಳ, ಮುತ್ತಪ್ಪ ಗಾಣದ ಸೇರಿದಂತೆ ರೈತರು ಉಪಸ್ಥಿತರಿದ್ದರು.

# ಪಾಂಡುರಂಗ ದೇವಸ್ಥಾನದಲ್ಲಿ ಜ್ಞಾನೇಶ್ವರಿ ಪಾರಾಯಣ ರಜತ ಮಹೋತ್ಸವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ಪಾಂಡುರಂಗ ದೇವಸ್ಥಾನದಲ್ಲಿ ಶ್ರಾವಣ ಮಾಸದ ಶ್ರೀ ಜ್ಞಾನೇಶ್ವರಿ ಪಾರಾಯಣದ ರಜತ ಮಹೋತ್ಸವ ಹಾಗೂ ಶ್ರೀ ಪಾಂಡುರಂಗರಕುಮಾಯಿ ನೂತನ ಮೂರ್ತಿಗಳ ಪ್ರತಿಷ್ಠಾಪನಾ ಮಹೋತ್ಸವ ಆ.25ರಿಂದ 29ರವರೆಗೆ ಐದು ದಿನಗಳ ಕಾಲ ಭಕ್ತಿಭಾವದಿಂದ ನಡೆಯಲಿದೆ.

ಮಹೋತ್ಸವದ ಅಂಗವಾಗಿ ಕಾಕಡಾ ಆರತಿ, ಜ್ಞಾನೇಶ್ವರಿ ಪಾರಾಯಣ, ಮಂಚರಿಗಾಥಾ ಭಜನೆ, ಪ್ರವಚನ, ನಾಮಜಪ, ಕೀರ್ತನೆ, ಜಾಗರ ಭಜನೆ ಹಾಗೂ ಭಾರೂಡ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಪ್ರತಿದಿನ ಭಕ್ತರಿಗೆ ಉಪಹಾರ ಹಾಗೂ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿದೆ.



ಆ.26ರಂದು ಬೆಳಿಗ್ಗೆ 7.50ಕ್ಕೆ ಪಂಡರಪುರದ ಚೈತನ್ಯ ಸದ್ಗುರು ಶ್ರೀ ಗೋಪಾಲ ಮಹಾರಾಜ ಹಾಗೂ ಶ್ರೀ ಪ್ರಭಾಕರ ದಾದಾ ಭುಜಂಗರಾವ್ ಬೋಧಲೆ ಮಹಾ ರಾಜ ಅವರ ಅಮೃತಹಸ್ತದಿಂದ ಶ್ರೀ ಪಾಂಡುರಂಗರಕುಮಾಯಿ ನೂತನ ಮೂರ್ತಿಗಳ ಪ್ರಾಣಪ್ರತಿಷ್ಠಾಪನೆ ನೆರವೇರಲಿದೆ.

ಆ.28ರಂದು ವಾರಕರಿ ರತ್ನ ಹ.ಭ.ಪ. ತುಕಾರಾಮ ಪವಾರ, ಕೊಲ್ಲಾಪುರ ಅವರ ಕೀರ್ತನೆ ಹಾಗೂ ರಾತ್ರಿ ಜಾಗರ ಭಜನೆ, ಭಾರೂಡ ನಡೆಯಲಿದೆ.

ಆ.29ರಂದು ಬೆಳಿಗ್ಗೆ ಕಾಕಡಾ ಆರತಿ, ಪಾರಾಯಣ ಹಾಗೂ ಮಂಚರಿಗಾಥಾ ಭಜನೆ ಬಳಿಕ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12.30ರವರೆಗೆ ಹ.ಭ.ಪ. ಸುನೀಲ ಬಾಬರ ಗುರೂಜಿ, ಕಲಬುರಗಿ ಅವರಿಂದ ಕಾಲಾ ಕೀರ್ತನೆ ನಡೆಯಲಿದೆ.

ಬಳಿಕ ವಾರಕರಿ ರತ್ನ ಹ.ಭ.ಪ. ತುಕಾರಾಮ ಪವಾರ, ಕೊಲ್ಲಾಪುರ ಅವರ ಸಾನಿಧ್ಯದಲ್ಲಿ ಸಮಾರೋಪ ಸಮಾರಂಭ ನಡೆಯಲಿದ್ದು, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ಶಾಸಕ ರಾಮಣ್ಣ ಲಮಾಣಿ ಹಾಗೂ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಮಹೋತ್ಸವಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ಪಾಂಡುರಂಗರಕುಮಾಯಿ ದೇವರ ಕೃಪೆಗೆ ಪಾತ್ರರಾಗಬೇಕು ಎಂದು ದೇವಸ್ಥಾನದ ಆಡಳಿತ ಮಂಡಳಿ ಮನವಿ ಮಾಡಿದೆ.

# ಗದಗವರೆಗೆ ಹೊಸಪೇಟೆ-ಅರಸೀಕೆರೆ ರೈಲು ವಿಸ್ತರಣೆಗೆ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ಆ. 28ರಿಂದ ಆರಂಭವಾಗಲಿರುವ ಹೊಸಪೇಟೆ-ಅರಸೀಕೆರೆ ಡೆಮು ರೈಲನ್ನು ಗದಗ ಜಂಕ್ಷನ್‌ವರೆಗೆ ವಿಸ್ತರಿಸುವಂತೆ ಹಾಗೂ ಬಳ್ಳಾರಿ-ಹುಬ್ಬಳ್ಳಿ ಮಾರ್ಗದಲ್ಲಿ ಹೊಸ ಡೆಮು ರೈಲು ಆರಂಭಿಸಿ ದಿನಕ್ಕೆ ಎರಡು ಟ್ರಿಪ್‌ಗಳ ಸಂಚಾರಕ್ಕೆ ಅವಕಾಶ ಕಲ್ಪಿಸುವಂತೆ ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ರೈಲ್ವೆ ಇಲಾಖೆಗೆ ಮನವಿ ಮಾಡಿದ್ದಾರೆ.

ಹೊಸಪೇಟೆ-ಅರಸೀಕೆರೆ ನಡುವೆ ವಾರದಲ್ಲಿ ಐದು ದಿನ ಸಂಚರಿಸಲಿರುವ 07343 ಹಾಗೂ 07344 ಸಂಖ್ಯೆಯ ರೈಲನ್ನು ಗದಗವರೆಗೆ ವಿಸ್ತರಿಸಿದರೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ. ವ್ಯಾಪಾರಸ್ಥರು, ಪ್ರವಾಸಿಗರು, ವಿದ್ಯಾರ್ಥಿಗಳು, ಕಾರ್ಮಿಕರು ಸೇರಿದಂತೆ ವಿವಿಧ ವರ್ಗದ ಪ್ರಯಾಣಿಕರಿಗೆ ಇದರಿಂದ ಪ್ರಯೋಜನವಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಅರಸೀಕೆರೆಯಿಂದ ರಾತ್ರಿ 9.30ಕ್ಕೆ ಹೊರಡುವ ರೈಲನ್ನು ಗದಗವರೆಗೆ



ವಿಸ್ತರಿಸಿದರೆ ರಾತ್ರಿ 11ರ ವೇಳೆಗೆ ಗದಗ ತಲುಪಬಹುದು. ಬಳಿಕ ಮುಂಜಾನೆ 4 ಗಂಟೆಗೆ ಗದಗದಿಂದ ರೈಲು ಹೊರಡುವಂತೆ ವೇಳಾಪಟ್ಟಿ ರೂಪಿಸಿದರೆ ಹೊಸಪೇಟೆ, ಕೊಪ್ಪಳ ಹಾಗೂ ಗದಗ ಭಾಗದ ಜನರಿಗೆ ಅನುಕೂಲವಾಗಲಿದೆ. ಈ ರೈಲಿನ ಮೂಲಕ ಹುಬ್ಬಳ್ಳಿ, ವಿಜಯಪುರ ಸೇರಿದಂತೆ ವಿವಿಧ ಭಾಗಗಳಿಗೆ ಸಂಪರ್ಕ ಕಲ್ಪಿಸಲು ಸಹ ಸಾಧ್ಯವಾಗಲಿದೆ ಎಂದು ಹೇಳಿದ್ದಾರೆ.

ಹೊಸಪೇಟೆ ಮಾರ್ಗದಲ್ಲಿ ಸಂಜೆ 6.40ರ ನಂತರ ಕೊಪ್ಪಳ-ಗದಗ ಭಾಗಕ್ಕೆ ಹೆಚ್ಚಿನ ರೈಲು ಸಂಪರ್ಕ ಇಲ್ಲದಿರುವ ಹಿನ್ನೆಲೆಯಲ್ಲಿ ಈ ರೈಲು ವಿಸ್ತರಣೆ ಅಗತ್ಯವಾಗಿದೆ. ಗದಗ ಜಂಕ್ಷನ್ ಮೂಲಕ ಹುಬ್ಬಳ್ಳಿ, ವಿಜಯಪುರ ಹಾಗೂ ಮಹಾರಾಷ್ಟ್ರ ಭಾಗಗಳಿಗೆ ಪ್ರಯಾಣಿಸುವವರಿಗೂ ರೈಲು ಸಂಪರ್ಕ ಮತ್ತಷ್ಟು ಸುಲಭವಾಗಲಿದೆ ಎಂದು ವಿಶ್ವನಾಥ ಖಾನಾಪೂರ ತಿಳಿಸಿದ್ದಾರೆ.

ಇದರ ಜೊತೆಗೆ ಬಳ್ಳಾರಿ-ಹುಬ್ಬಳ್ಳಿ ಹಾಗೂ ಹುಬ್ಬಳ್ಳಿ-ಬಳ್ಳಾರಿ ಮಾರ್ಗದಲ್ಲಿ ಹೊಸ ಡೆಮು ರೈಲು ಆರಂಭಿಸಿ, ಮುಂಜಾನೆ ಮತ್ತು ರಾತ್ರಿ ತಲಾ ಒಂದು ಟ್ರಿಪ್ ಸಂಚರಿಸುವಂತೆ ಕ್ರಮ ಕೈಗೊಳ್ಳಬೇಕು. ಇದರಿಂದ ಈ ಭಾಗದ ಕಾರ್ಮಿಕರು, ವಿದ್ಯಾರ್ಥಿಗಳು, ಪ್ರವಾಸಿಗರು ಮತ್ತು ವ್ಯಾಪಾರಸ್ಥರಿಗೆ ಅನುಕೂಲವಾಗುವುದರೊಂದಿಗೆ ವ್ಯಾಪಾರ, ವಾಣಿಜ್ಯ ಮತ್ತು ಕೈಗಾರಿಕಾ ಚಟುವಟಿಕೆಗಳ ಬೆಳವಣಿಗೆಗೂ ಸಹಕಾರಿಯಾಗಲಿದೆ ಎಂದು ಅವರು ಮನವಿ ಮಾಡಿದ್ದಾರೆ.

ಕೇಂದ್ರ ರೈಲ್ವೆ ಸಚಿವರು, ರೈಲ್ವೆ ಇಲಾಖೆ ಹಾಗೂ ಕೊಪ್ಪಳ ಲೋಕಸಭಾ ಸದಸ್ಯ ರಾಜಶೇಖರ ಹಿಟ್ನಾಳ ಮತ್ತು ಗದಗ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಅವರು ಈ ಬೇಡಿಕೆಗೆ ಸ್ಪಂದಿಸಿ ಎರಡೂ ಜಿಲ್ಲೆಗಳ ಜನರಿಗೆ ಅನುಕೂಲ ಕಲ್ಪಿಸಬೇಕು ಎಂದು ವಿಶ್ವನಾಥ ಖಾನಾಪೂರ ಒತ್ತಾಯಿಸಿದ್ದಾರೆ.

# ಕ್ರಾಂತಿಯ ಜ್ಯೋತಿ: ಪ್ರವಾದಿ ಮುಹಮ್ಮದ್ ಸೀರತ್ ಅಭಿಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಮಾತೆ ಇಸ್ಲಾಮಿ ಹಿಂದ್ ಕರ್ನಾಟಕ ವತಿಯಿಂದ ಪ್ರವಾದಿ ಮುಹಮ್ಮದ್ (ಸ) ಅವರ ಜನ್ಮ ದಿನದ ಪ್ರಯುಕ್ತ ಆ.26ರಿಂದ ಸೆ.6ರವರೆಗೆ ರಾಜ್ಯಾದ್ಯಂತ ಕ್ರಾಂತಿಯ ಜ್ಯೋತಿಪ್ರವಾದಿ ಮುಹಮ್ಮದ್ (ಸ) ಎಂಬ ಶೀರ್ಷಿಕೆಯಡಿ ಸೀರತ್ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಮಾತೆ ಇಸ್ಲಾಮಿ ಹಿಂದ್ ಕರ್ನಾಟಕದ ಗದಗ ಜಿಲ್ಲಾ ಅಧ್ಯಕ್ಷ ಕೆ.ಐ. ಶೇಖ್ ತಿಳಿಸಿದರು.




ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರವಾದಿ ಮುಹಮ್ಮದ್ (ಸ) ಅವರು ಜಗತ್ತಿಗೆ ಸಾರಿದ ಸಂದೇಶವು ಸತ್ಯ, ನ್ಯಾಯ, ಕರುಣೆ, ಮಾನವ ಸಮಾನತೆ, ಮಾನವ ಘನತೆ ಹಾಗೂ ಮಾನವ ಕುಲದ ಏಕತೆಯನ್ನು ಆಧರಿಸಿತ್ತು. ಜನರ ಮನಸ್ಸುಗಳನ್ನು ಸಂಸ್ಕರಿಸಿ, ನೈತಿಕತೆ ಮತ್ತು ಚಾರಿತ್ರ್ಯವನ್ನು ಶುದ್ಧೀಕರಿಸುವ ಮೂಲಕ ವ್ಯಕ್ತಿ ಹಾಗೂ ಸಮಾಜದ ಪರಿವರ್ತನೆಗೆ ಅವರು ಕಾರಣರಾದರು ಎಂದರು.

ಪ್ರವಾದಿ ಮುಹಮ್ಮದ್ (ಸ) ಅವರ ಕ್ರಾಂತಿ ಅಪ್ಪಟ ಮಾನವೀಯ ಕ್ರಾಂತಿಯಾಗಿದ್ದು, ಆಧ್ಯಾತ್ಮಿಕ, ಸಾಮಾಜಿಕ, ಕೌಟುಂಬಿಕ, ಆರ್ಥಿಕ, ಶೈಕ್ಷಣಿಕ ಹಾಗೂ ಆಡಳಿತ ಸೇರಿದಂತೆ ಮಾನವ ಜೀವನದ ವಿವಿಧ ಕ್ಷೇತ್ರಗಳನ್ನು ಒಳಗೊಂಡಿತ್ತು. ಸುಭಿಕ್ಷೆ ಮತ್ತು ನಿರ್ಭಯತ್ವದ ಸಮಾಜ ನಿರ್ಮಾಣವೇ ಅವರ ಗುರಿಯಾಗಿತ್ತು. ಪ್ರವಾದಿ ಮುಹಮ್ಮದ್ (ಸ) ಅವರ ಸಂದೇಶಗಳನ್ನು ಕನ್ನಡಿಗರಿಗೆ ಪರಿಚಯಿಸುವುದು, ಅವರ ಕುರಿತು ಇರುವ ತಪ್ಪ ಕಲ್ಪನೆಗಳನ್ನು ದೂರ ಮಾಡುವುದು ಹಾಗೂ ಪರಸ್ಪರ ಬಾಂಧವ್ಯವನ್ನು ಬಲಪಡಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದರು.

ಅಭಿಯಾನದ ಅಂಗವಾಗಿ ನಗರದ ನೌಕರ ಭವನ, ಶಹಾಪುರ ಪೇಟೆ, ರಾಜೀವಗಾಂಧಿ ನಗರ ಸೇರಿದಂತೆ ವಿವಿಧೆಡೆ ಸೀರತ್ ಅಭಿಯಾನದ ಕಾರ್ಯಕ್ರಮಗಳು ನಡೆಯಲಿವೆ ಎಂದು ಹೇಳಿದರು. ರಾಜ್ಯದ ವಿವಿಧೆಡೆ ವೈಯಕ್ತಿಕ ಭೇಟಿ, ವಿಚಾರಗೋಷ್ಠಿ, ಸಾರ್ವಜನಿಕ ಸಮಾ ವೇಶ, ಸಂವಾದ, ಚರ್ಚಾಗೋಷ್ಠಿ, ಸೀರತ್ ಪ್ರವಚನ, ಸೀರತ್ ಪ್ರದರ್ಶನ, ಸಮಾಜಸೇವಾ ಚಟುವಟಿಕೆ ಹಾಗೂ ಸೌಹಾರ್ದ ಸಂದೇಶ ರ್‍ಯಾಲಿ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಖ್ಯಾತ ಸಾಹಿತಿ ಹಾಗೂ ಗ್ರಂಥಕರ್ತ ಯೋಗೇಶ್ ಮಾಸ್ಟರ್ ಬರೆದ ಮಾನವ ಮನಸ್ಸಿನ ಕೃಷಿಕ ಮನದೊಡೆಯ ಪ್ರವಾದಿ ಮುಹಮ್ಮದ್ (ಸ) ಹಾಗೂ ವಾರ್ತಾ ಭಾರತಿ ಪ್ರಧಾನ ಸಂಪಾದಕ ಅಬ್ದುಸ್ಸಲಾಮ್ ಪತ್ತಿಗೆ ಬರೆದ ಸಮಗ್ರ ಕ್ರಾಂತಿಯ ಜ್ಯೋತಿ ಬೆಳಗಿದ ಪೈಗಂಬರ್ ಮುಹಮ್ಮದ್ (ಸ) ಕೃತಿಗಳನ್ನು ಬಿಡುಗಡೆಗೊಳಿಸಲಾಯಿತು.

ಸುದ್ದಿಗೋಷ್ಠಿಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಕೆ.ಎಂ. ಬಿಲ್ಲಿವಾಲೆ, ಜುನ್ಯೆದ್ ಉಮಚಗಿ, ಮಹಮ್ಮದ್ ಮುಲ್ಲಾ, ಯೂಸುಫ್ ನಮಾಜಿ, ಡಾ. ಪ್ಯಾರಾಅಲಿ, ರಿಯಾಜ್ ಶೇಖ್, ಜಿ.ಬಿ. ಖಾಜಿ, ರಾಜಿಸಾಬ್ ಕಲ್ಮನಿ ಹಾಗೂ ಶಬ್ಬೀರ ಮೌಲಾನಾ ಇದ್ದರು.

# ಪ್ರಜಾಸೌಧ ನಿರ್ಮಾಣಕ್ಕೆ ವಿರೋಧವಿಲ್ಲ, ಮೈದಾನಕ್ಕೆ ಧಕ್ಕೆ ಬೇಡ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ದೊಡ್ಡೂರು ರಸ್ತೆಯ ಉಮಾ ವಿದ್ಯಾಲಯ ಪ್ರೌಢಶಾಲೆ ಮೈದಾನದ ಬಳಿ ಕಂದಾಯ ಇಲಾಖೆಯಿಂದ ಪ್ರಜಾಸೌಧ ನಿರ್ಮಾಣಕ್ಕೆ ಉದ್ದೇಶಿಸಿರುವ ಜಾಗದ ಸರ್ವೆ ಕಾರ್ಯಕ್ಕೆ ಯುವಕರು ಹಾಗೂ ಸಾರ್ವಜನಿಕರು ಮಂಗಳವಾರ ತಕರಾರು ವ್ಯಕ್ತಪಡಿಸಿದರು.



ಪ್ರಜಾಸೌಧ ನಿರ್ಮಾಣಕ್ಕೆ ಉದ್ದೇಶಿಸಿರುವ ಜಾಗೆ ಹಾಗೂ ಮೈದಾನದ ಸ್ಥಳವನ್ನು ಅಳತೆ ಮಾಡಲು ಭೂಮಾಪನ ಇಲಾಖೆಯ ಅಧಿಕಾರಿಗಳು ಆಗಮಿಸಿದ ವೇಳೆ ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಹಾಗೂ ಯುವ ಮುಖಂಡ ಚನ್ನಪ್ಪ ಜಗಲಿ ನೇತೃತ್ವದಲ್ಲಿ ಸ್ಥಳಕ್ಕೆ ತೆರಳಿದ ಯುವಕರು ಹಾಗೂ ಸಾರ್ವಜನಿಕರು ಸರ್ವೆ ಕಾರ್ಯಕ್ಕೆ ಆಕ್ಷೇಪ ವ್ಯಕ್ತಪಡಿಸಿದರು.

ಲಕ್ಷ್ಮೇಶ್ವರ ಪಟ್ಟಣದಲ್ಲಿ ಇದೊಂದೇ ಪ್ರಮುಖ ದೊಡ್ಡ ಆಟದ ಮೈದಾನವಾಗಿದೆ. ತಾಲೂಕು ಕ್ರೀಡಾಂಗಣವಾಗಿ ಅಭಿವೃದ್ಧಿಪಡಿಸಲು ಇಲ್ಲಿ 400 ಮೀಟರ್ ಓಟದ ಪಥ ಸೇರಿದಂತೆ ಅಗತ್ಯ ಸೌಲಭ್ಯಗಳಿಗೆ ಸಾಕಷ್ಟು ಜಾಗ ಬೇಕಾಗುತ್ತದೆ. ಪ್ರಜಾಸೌಧ ನಿರ್ಮಾಣಕ್ಕೆ ನಮ್ಮ ವಿರೋಧವಿಲ್ಲ. ಆದರೆ ಮೈದಾನದ ಒಂದು ಇಂಚು ಜಾಗಕ್ಕೂ ಧಕ್ಕೆ ಬರಬಾರದು ಎಂದು ಯುವಕರು ಒತ್ತಾಯಿಸಿದರು.

ಈ ವೇಳೆ ತಹಸೀಲ್ದಾರ್ ಧನಂಜಯ ಎಂ. ಮಾತನಾಡಿ, ಕಂದಾಯ ಇಲಾಖೆಗೆ ಸೇರಿದ 2 ಎಕರೆ 34 ಗುಂಟೆ ಜಾಗೆಯಲ್ಲಿ ಮಾತ್ರ ಪ್ರಜಾಸೌಧ ನಿರ್ಮಿಸುವ ಉದ್ದೇಶವಿದೆ. ಈ ನಿವೇಶನ ಕಂದಾಯ ಇಲಾಖೆಗೆ ಸೇರಿದ್ದು, ಮೈದಾನವು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸೇರಿದೆ. ಅನ್ಯ ಇಲಾಖೆಯ ಜಾಗದಲ್ಲಿ ತಾವು ಹಸ್ತಕ್ಷೇಪ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಆದರೆ, ಪ್ರಸ್ತಾವಿತ ಜಾಗೆಯಲ್ಲಿ ಪ್ರಜಾಸೌಧ ನಿರ್ಮಾಣವಾದರೆ ಭವಿಷ್ಯದಲ್ಲಿ ಮೈದಾನ ಅಭಿವೃದ್ಧಿಗೆ ತೊಂದರೆಯಾಗುವ ಸಾಧ್ಯತೆಯಿದೆ ಎಂದು ಯುವಕರು ಆಕ್ಷೇಪಿಸಿದರು.

ಈ ಕುರಿತು ಸ್ಥಳೀಯ ಹಿರಿಯರು, ಜನಪ್ರತಿನಿಧಿಗಳು ಹಾಗೂ ಪ್ರಮುಖರ ಸಭೆಯನ್ನು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಕರೆದು, ಕ್ರೀಡಾಂಗಣಕ್ಕೆ ಯಾವುದೇ ರೀತಿಯ ಧಕ್ಕೆಯಾಗದಂತೆ ಪ್ರಜಾಸೌಧ ನಿರ್ಮಾಣದ ಬಗ್ಗೆ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸರ್ವೆ ಕಾರ್ಯಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಯುವಕರು ಭೂಮಾಪನ ಇಲಾಖೆಯ ಅಧಿಕಾರಿಗಳಿಗೆ ಸ್ಥಳದಲ್ಲಿಯೇ ತಕರಾರು ಅರ್ಜಿ ಸಲ್ಲಿಸಿದರು. ಈ ಹಿನ್ನೆಲೆಯಲ್ಲಿ ಯಾವುದೇ ಅಂತಿಮ ನಿರ್ಧಾರ ಕೈಗೊಳ್ಳದೆ ತಹಸೀಲ್ದಾರ್ ಹಾಗೂ ಭೂಮಾಪನ ಇಲಾಖೆಯ ಅಧಿಕಾರಿಗಳು ಸ್ಥಳದಿಂದ ತೆರಳಿದರು.

ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ಎಂ.ಎ. ನಧಾಫ್, ತಾಲೂಕು ಭೂಮಾಪನ ಅಧಿಕಾರಿ ಇಲಿಯಾಸ್ ಮಕಾಂದಾರ, ಪುರಸಭೆ ಕಂದಾಯ ಅಧಿಕಾರಿ ಸುರೇಶ ಪೂಜಾರ, ಯುವಜನ ಮತ್ತು ಕ್ರೀಡಾ ಇಲಾಖೆ ಅಧಿಕಾರಿ ಉಳ್ಳಟ್ಟಿ, ಯುವ ಮುಖಂಡರಾದ ಡಿ.ಬಿ. ಫಕ್ಕಿರಪ್ಪ, ಮೋಹನ ನಂದೆಣ್ಣವರ, ಸಂತೋಷ ನಂದೆಣ್ಣವರ, ಮಂಜುನಾಥ ಎಚ್.ಎಸ್., ವಿಶ್ವನಾಥ ಭಜಕ್ಕನವರ, ಅಬ್ದುಲ್‌ಗನಿ ನವಲಗುಂದ, ಎಸ್.ಎಫ್. ಕೊಡ್ಲಿ, ಮುಖ್ಯೋಪಾಧ್ಯಾಯ ಎಸ್.ಬಿ. ಸಂಗನಪೇಟ, ಅಶೋಕ ಲಿಂಗಶೆಟ್ಟಿ ಸೇರಿದಂತೆ ಹಲವರು ಇದ್ದರು.

**ಸಂಕ್ಷಿಪ್ತ ಸುದ್ದಿಗಳು**

## ಶಿಕ್ಷಣ ದಾಸೋಹದ ಮೂಲಕ ಕ್ರಾಂತಿ ಮಾಡಿದ ತೋಂಟದ ಸಿದ್ದಲಿಂಗ ಶ್ರೀಗಳು



**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಪಟ್ಟಣದ ಬಸವ ಕೇಂದ್ರ, ಹಾಗೂ ಶರಣ ಸಾಹಿತ್ಯ ಪರಿಷತ್ತಿನ ಯುವ ಘಟಕದ ಆಶ್ರಯದಲ್ಲಿ ಸ್ಥಳೀಯ ತೋಂಟದಾರ್ಯ ಪ್ರಸಾದ ನಿಲಯದಲ್ಲಿ ನಡೆದ ಶರಣ ಶ್ರಾವಣ2026 ಕಾರ್ಯಕ್ರಮದಲ್ಲಿ ಗದಗ ತೋಂಟದಾರ್ಯ ಶ್ರೀಗಳ ಶಿಕ್ಷಣ ದಾಸೋಹವನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಶಿಕ್ಷಕಿ ಸುಮಿತ್ರಾ ಹುಣಸಿಮರದ ಮಾತನಾಡಿ, ಪೂರ್ವಾಶ್ರಮದಲ್ಲಿ ಸಿದ್ದರಾಮರಾಗಿದ್ದ ಸಿದ್ದಲಿಂಗ ಶ್ರೀಗಳು ಹಿರಿಯ ಶ್ರೀಗಳ ಮಾರ್ಗದರ್ಶನದಲ್ಲಿ ಮೂರುಸಾವಿರ ಮಠದಲ್ಲಿ ವಿದ್ಯಾಭ್ಯಾಸ ಮಾಡಿದರು. ಈ ಅವಧಿಯಲ್ಲಿ ಸಿ.ಎಂ. ಮಣ್ಣೂರ ಎಂಬ ಗುರುಗಳು ಅವರ ಮೇಲೆ ಅಗಾಧ ಪ್ರಭಾವ ಬೀರಿದ್ದರು ಎಂದರು.

ಮುಂದೆ ಹಿರಿಯ ಶ್ರೀಗಳ ಆಶಯದಂತೆ ಗದಗ ತೋಂಟದಾರ್ಯ ಮಠದ 19ನೇ ಪೀಠಾಧಿಪತಿಯಾದ ಸಿದ್ದಲಿಂಗ ಶ್ರೀಗಳು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನೇ ಮಾಡಿದರು. ಜನರು ದೇವಾಲಯಗಳ ಮುಂದೆ ಸರದಿ ಸಾಲಿನಲ್ಲಿ ನಿಲ್ಲುವ ಬದಲು ಗ್ರಂಥಾಲಯಗಳ ಮುಂದೆ ನಿಂತರೆ ದೇಶ ಉದ್ಧಾರವಾಗುತ್ತದೆ ಎಂಬ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯವನ್ನು ಮೈಗೂಡಿಸಿಕೊಂಡಿದ್ದ ಶ್ರೀಗಳು ಗದಗದಲ್ಲಿ ಶಿಕ್ಷಣ ಸಂಸ್ಥೆ ಸ್ಥಾಪಿಸುವ ಮೂಲಕ ಶಿಕ್ಷಣ ದಾಸೋಹಕ್ಕೆ ಮುನ್ನುಡಿ ಬರೆದರು ಎಂದು ಹೇಳಿದರು.

ತೋಂಟದಾರ್ಯ ಮಠದ ಎಲ್ಲ ಶಾಖಾಮಠಗಳಿರುವ ಊರುಗಳಲ್ಲಿ ವಿದ್ಯಾಲಯಗಳನ್ನು ಆರಂಭಿಸಿ ಬಡ ಮಕ್ಕಳ ಶಿಕ್ಷಣದ ಹಂಬಲಕ್ಕೆ ಜೀವ ತುಂಬಿದರು. ಈ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಅನೇಕ ವಿದ್ಯಾರ್ಥಿಗಳು ಇಂದು ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಉನ್ನತ ಸ್ಥಾನದಲ್ಲಿದ್ದಾರೆ. ಶ್ರೀಗಳ ಶಿಕ್ಷಣ ಸೇವೆ ಸಮಾಜಕ್ಕೆ ನೀಡಿದ ಅಮೂಲ್ಯ ಕೊಡುಗೆಯಾಗಿದೆ ಎಂದು ಸ್ಮರಿಸಿದರು.

ಆಹ್ವಾನಿತರಾಗಿ ಆಗಮಿಸಿದ್ದ ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕಿ ಡಾ. ಸುಧಾ ಕೌಜಗೇರಿ ಮಾತನಾಡಿ, ತೋಂಟದಾರ್ಯ ಶ್ರೀಗಳ ಶಿಕ್ಷಣ ದಾಸೋಹವನ್ನು ಎಷ್ಟು ಸ್ಮರಿಸಿದರೂ ಕಡಿಮೆಯೇ. ಅವರ ಆಶಯದಂತೆ ಆದಿಕವಿ ಪಂಪನ ನೆಲದ ಜಿಗುಟುತನವನ್ನು ಉಳಿಸಿ ಬೆಳೆಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ನಿಂಗಮ್ಮ ಹೂಗಾರ ವಿದ್ಯಾಲಯದ ಮಕ್ಕಳು ಪ್ರದರ್ಶಿಸಿದ ತೋಂಟದಾರ್ಯ ಶ್ರೀಗಳ ಕುರಿತು ನಡೆ ಕಲಿಸಿದ ಬಸವಣ್ಣ ರೂಪಕ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು. ಪ್ರೊ. ಎಸ್.ಎಸ್. ಹರ್ಲಾಪೂರ ಉಪಸ್ಥಿತರಿದ್ದರು. ನಿಂಗಮ್ಮ ಹೂಗಾರ ವಿದ್ಯಾಲಯಗಳ ನಿರ್ದೇಶಕ ಶಿವಯೋಗಿ ಹುಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು. ಕವಿತಾ ಬಿರಸಲ ಪ್ರಸಾದ ದಾಸೋಹ ಮಾಡಿದರು. ಶೈಲಶ್ರೀ ಗುಗ್ಗರಿ ನಿರೂಪಿಸಿದರು.

### 30 ಸಾವಿರಕ್ಕೂ ಹೆಚ್ಚು ಹೆಸರು ಕಡಿತ; 4,804 ಮತದಾರರಿಗೆ ನೋಟಿಸ್

## ಶಿರಹಟ್ಟಿ ಕ್ಷೇತ್ರದ ಕರಡು ಮತದಾರರ ಪಟ್ಟಿ ಪ್ರಕಟ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮತದಾರರ ಪಟ್ಟಿಗಳ ಸಮಗ್ರ, ವಿಶೇಷ ಪರಿಷ್ಕರಣೆ–2026ರ ಬಳಿಕ ಶಿರಹಟ್ಟಿ ವಿಧಾನಸಭಾ ಮತಕ್ಷೇತ್ರದ ಕರಡು ಮತದಾರರ ಪಟ್ಟಿ ಪ್ರಕಟವಾಗಿದ್ದು, ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತೆಗೆದುಹಾಕುವಿಕೆ ಸೇರಿದಂತೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಸಂಬಂಧಿಸಿದ ಮತದಾರರು ಅರ್ಜಿ ಸಲ್ಲಿಸಬಹುದು ಎಂದು ಮತದಾರರ ನೋಂದಣಾಧಿಕಾರಿ ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಹೇಳಿದರು.

ಸೋಮವಾರ ಶಿರಹಟ್ಟಿ ತಹಸೀಲ್ದಾರ್ ಕಚೇರಿಯಲ್ಲಿ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರಡು ಮತದಾರರ ಪಟ್ಟಿ ಪ್ರಕಟಿಸುವ ಕುರಿತು ರಾಷ್ಟ್ರೀಯ ಹಾಗೂ ರಾಜ್ಯ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿರಹಟ್ಟಿ ಮತಕ್ಷೇತ್ರದಲ್ಲಿ ಈ ಹಿಂದೆ 252 ಮತಗಟ್ಟೆಗಳಿದ್ದು, 1,200ಕ್ಕೂ ಹೆಚ್ಚು ಮತದಾರರನ್ನು ಹೊಂದಿರುವ ಪ್ರದೇಶಗಳಲ್ಲಿ ಹೊಸದಾಗಿ ಏಳು ಮತಗಟ್ಟೆಗಳನ್ನು ರಚಿಸಲಾಗಿದೆ. ಶಿವಾಜಿನಗರ, ಕುಂದ್ರಳ್ಳಿ, ರಾಮಗೇರಿ, ಆದ್ರಳ್ಳಿ, ಹರದಗಟ್ಟಿ, ಹುಲ್ಲೂರು ಹಾಗೂ ಕೋಗನೂರುಗಳಲ್ಲಿ ಹೊಸ ಮತಗಟ್ಟೆಗಳು ರಚನೆಯಾಗಿದ್ದು, ಒಟ್ಟು ಮತಗಟ್ಟೆಗಳ ಸಂಖ್ಯೆ 259ಕ್ಕೆ ಏರಿಕೆಯಾಗಿದೆ ಎಂದರು.

ಕರಡು ಮತದಾರರ ಪಟ್ಟಿ ಪ್ರಕಟಕ್ಕೂ ಮುನ್ನ ಕ್ಷೇತ್ರದಲ್ಲಿ 2,30,268 ಮತದಾರರಿದ್ದರು. ಎಎಸ್‌ಡಿಡಿಐ ಪಟ್ಟಿಯ ಪರಿಷ್ಕರಣೆ ಬಳಿಕ ಕರಡು ಪಟ್ಟಿಯಲ್ಲಿ ಮತದಾರರ ಸಂಖ್ಯೆ 2,00,419ಕ್ಕೆ ಇಳಿಕೆಯಾಗಿದೆ. ಕ್ಷೇತ್ರದಲ್ಲಿ ಒಟ್ಟು 4,339 ಅನಾಮಲಿ ಪ್ರಕರಣಗಳು ಹಾಗೂ 1,464 ನೋ ಮ್ಯಾಪಿಂಗ್ ಪ್ರಕರಣಗಳು ಪತ್ತೆಯಾಗಿವೆ. ಈ ಹಿನ್ನೆಲೆಯಲ್ಲಿ ಒಟ್ಟು 4,804 ಮತದಾರರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಅಥವಾ ತೆಗೆದುಹಾಕುವಿಕೆ ಸೇರಿದಂತೆ ಸಂಬಂಧಿಸಿದ ವಿಚಾರಣೆ ಹಾಗೂ ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ಆ.24ರಿಂದ ಅ.26ರವರೆಗೆ ನಡೆಯಲಿದೆ. ಈ ಪ್ರಕ್ರಿಯೆಗಾಗಿ 16 ಎಇಆರ್‌ಒಗಳನ್ನು ನೇಮಕ ಮಾಡಲಾಗಿದೆ ಎಂದರು.

ಸಭೆಯಲ್ಲಿ ಶಿರಹಟ್ಟಿ ತಹಸೀಲ್ದಾರ್ ಕೆ. ರಾಘವೇಂದ್ರ ರಾವ್, ಲಕ್ಷ್ಮೇಶ್ವರ ತಹಶೀಲ್ದಾರ್ ಧನಂಜಯ, ಸುಜಾತಾ ದೊಡ್ಡಮನಿ, ಶಂಕರ ಮರಾಠೆ, ಬಸವರಾಜ ವಡವಿ, ಶರಣಪ್ಪ ಹೂಗಾರ, ಎಸ್.ಎಸ್. ಅಸ್ಕಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ವರ್ಷಕ್ಕೆ 125 ದಿನ ಕೆಲಸ | ದಿನಕ್ಕೆ ₹382 ಕೂಲಿ, ಇ-ಕೆವೈಸಿಗೆ ಒತ್ತು

# ಬರದ ನಡುವೆ ಗ್ರಾಮೀಣರಿಗೆ ಉದ್ಯೋಗದ ಆಸರೆ



**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ನಿರೀಕ್ಷಿತ ಪ್ರಮಾಣದಲ್ಲಿ ನಡೆಯದ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದ ಜನರು ಉದ್ಯೋಗ ಅರಸಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯಲು ಜಿಲ್ಲೆಯಾದ್ಯಂತ ಜಾಬ್ ಕಾರ್ಡ್ ಮೇಳ ಹಾಗೂ ವಿಬಿ ಜಿರಾಮ್ ಜಿ ಯೋಜನೆಯ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಆಯುಕ್ತಾಲಯದ ನಿರ್ದೇಶನದಂತೆ ಆ.15ರಿಂದ ಸೆ.15ರವರೆಗೆ ಒಂದು ತಿಂಗಳ ಕಾಲ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಬ್ ಕಾರ್ಡ್ ಮೇಳ ಆಯೋಜಿಸಲಾಗಿದ್ದು, ಗ್ರಾಮೀಣ ಜನರಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸುವ ಮೂಲಕ ವಲಸೆ ತಡೆಗಟ್ಟುವ ಉದ್ದೇಶ ಹೊಂದಲಾಗಿದೆ. ಯೋಜನೆಯ ಕುರಿತು ಸಮಗ್ರ ಮಾಹಿತಿ ನೀಡಲು ಗ್ರಾಮಗಳಲ್ಲಿ ಜಾಗೃತಿ ವಾಹನಗಳ ಮೂಲಕವೂ ಅರಿವು ಮೂಡಿಸಲಾಗುತ್ತಿದೆ.

ಜಿಲ್ಲೆಯು ಮೂಲತಃ ಮಳೆಯಾಶ್ರಿತ ಪ್ರದೇಶವಾಗಿದ್ದು, ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿವೆ. ಹೀಗಾಗಿ ಕೃಷಿಯನ್ನೇ ಅವಲಂಬಿಸಿರುವ ಕುಟುಂಬಗಳಿಗೆ ಸ್ಥಳೀಯವಾಗಿ ಕೂಲಿ ಕೆಲಸ ಒದಗಿಸುವುದು ಅಗತ್ಯವಾಗಿದ್ದು, ಈ ಹಿನ್ನೆಲೆಯಲ್ಲಿ ಸರ್ಕಾರದ ಸೂಚನೆಯಂತೆ ಜಾಬ್ ಕಾರ್ಡ್ ಮೇಳ ಆಯೋಜಿಸಲಾಗಿದೆ.

ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಅರ್ಹ ಕೂಲಿಕಾರರಿಗೆ ವರ್ಷದಲ್ಲಿ 125 ದಿನಗಳವರೆಗೆ ಕೂಲಿ ಕೆಲಸ ಒದಗಿಸುವ ಉದ್ದೇಶವಿದೆ. ಜಾಬ್ ಕಾರ್ಡ್ ಹೊಂದಿರುವ ಹಾಗೂ ಇ-ಕೆವೈಸಿ ಪೂರ್ಣಗೊಳಿಸಿರುವ ಅರ್ಹ ಕೂಲಿಕಾರರು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

**100% ಇ-ಕೆವೈಸಿಗೆ ಗುರಿ**

2026ರ ಜುಲೈ 1ರಿಂದ ಜಾರಿಯಲ್ಲಿರುವ ಯೋಜನೆಯಡಿ ಈಗಾಗಲೇ ನೋಂದಾಯಿಸಿಕೊಂಡು ಇ-ಕೆವೈಸಿ ಪೂರ್ಣಗೊಳಿಸಿರುವ ಸಕ್ರಿಯ ಕುಟುಂಬಗಳ ಕೂಲಿಕಾರರಿಗೆ ಕೆಲಸ ಒದಗಿಸಲಾಗುತ್ತಿದೆ. ಇ-ಕೆವೈಸಿ ಪೂರ್ಣಗೊಳಿಸದ ಕುಟುಂಬಗಳನ್ನು ಗುರುತಿಸಿ, ಶೇ.100ರಷ್ಟು ಇ-ಕೆವೈಸಿ ಪೂರ್ಣಗೊಳಿಸುವುದು ಜಾಬ್ ಕಾರ್ಡ್ ಮೇಳದ ಪ್ರಮುಖ ಉದ್ದೇಶವಾಗಿದೆ. ಈ ಕುರಿತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಿರಂತರ ಜಾಗೃತಿ ಮೂಡಿಸಲಾಗುತ್ತಿದೆ.

ಮೇಳವು ಕೇವಲ ಹೊಸ ಕುಟುಂಬಗಳಿಗೆ ಉದ್ಯೋಗ ಚೀಟಿ ವಿತರಣೆ ಅಥವಾ ನೋಂದಣಿಗೆ ಸೀಮಿತವಾಗಿಲ್ಲ. ಸ್ಥಳೀಯವಾಗಿ ಕೆಲಸದ ಅವಶ್ಯಕತೆ ಇರುವ ಅಕುಶಲ ಕುಟುಂಬಗಳಿಗೆ ಹೆಚ್ಚಿನ ಉದ್ಯೋಗ ಸೃಷ್ಟಿಸಿ, ಗ್ರಾಮೀಣ ಆರ್ಥಿಕ ಚಟುವಟಿಕೆಗಳಿಗೆ ವೇಗ ನೀಡುವ ಗುರಿಯನ್ನೂ ಹೊಂದಿದೆ. ಜಿಲ್ಲೆಯಾದ್ಯಂತ ಆಂದೋಲನೋಪಾದಿ ಯಲ್ಲಿ ನಡೆಯುತ್ತಿರುವ ಜಾಬ್ ಕಾರ್ಡ್ ಮೇಳದಡಿ ಅರ್ಹ ನೋಂದಾಯಿತ ಕುಟುಂಬಗಳಿಗೆ ಯೋಜನೆಯ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಅರ್ಹ ಕುಟುಂಬಗಳು ವರ್ಷದಲ್ಲಿ 125 ದಿನಗಳ ಕೂಲಿ ಕೆಲಸ ಪಡೆದು, ದಿನಕ್ಕೆ ₹382ರಂತೆ ಒಟ್ಟು ₹47,750ರವರೆಗೆ ಕೂಲಿ ಪಡೆಯಲು ಅವಕಾಶವಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮನವಿ ಮಾಡಿದೆ.

> ಬರ ಪರಿಸ್ಥಿತಿಯಿಂದ ಗ್ರಾಮೀಣ ಭಾಗದಲ್ಲಿ ಕೃಷಿ ಕೆಲಸದ ಅವಕಾಶಗಳು ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಜಾಬ್ ಕಾರ್ಡ್ ಮೇಳ ಮಹತ್ವ ಪಡೆದಿದೆ. ಗ್ರಾಮದಲ್ಲಿಯೇ ಕೂಲಿ ಕೆಲಸ ದೊರೆಯುವುದರಿಂದ ಉದ್ಯೋಗ ಅರಸಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಪ್ಪಿಸಬಹುದು. ನೋಂದಾಯಿತ ಕುಟುಂಬಗಳು ಇ-ಕೆವೈಸಿ ಪೂರ್ಣಗೊಳಿಸಿ ಉದ್ಯೋಗಾವಕಾಶ ಪಡೆದುಕೊಳ್ಳಬೇಕು.
> **-ಸಿ.ಎನ್. ಶ್ರೀಧರ್,** ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಪಂ, ಗದಗ.

> ಮುಂಗಾರು ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ಕಡಿಮೆಯಾಗಿರುವ ಸಂದರ್ಭದಲ್ಲಿ ಗ್ರಾಮದಲ್ಲಿಯೇ ಉದ್ಯೋಗ ಕಲ್ಪಿಸುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ. ಜಾಬ್ ಕಾರ್ಡ್ ಹೊಂದಿ ಇ-ಕೆವೈಸಿ ಪೂರ್ಣಗೊಳಿಸಿರುವ ಪ್ರತಿಯೊಬ್ಬ ಅರ್ಹ ಕೂಲಿಕಾರನಿಗೂ ಯೋಜನೆಯ ಪ್ರಯೋಜನ ದೊರೆಯುವಂತೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಸಲು ಗಮನಹರಿಸಲಾಗುತ್ತಿದೆ.
> **- ಸಿ.ಆರ್. ಮುಂಡರಗಿ,** ಉಪ ಕಾರ್ಯದರ್ಶಿ, ಜಿಪಂ, ಗದಗ

# ರೈತರು, ಸ್ವ-ಸಹಾಯ ಗುಂಪುಗಳಿಗೆ ಜೀವನೋಪಾಯ ಸೇವಾ ಕೇಂದ್ರ ಆಸರೆ



**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಗ್ರಾಮೀಣ ಪ್ರದೇಶದ ರೈತರು ಹಾಗೂ ಸ್ವ-ಸಹಾಯ ಗುಂಪುಗಳಿಗೆ ಕೃಷಿ ಸಲಕರಣೆ, ತರಬೇತಿ ಹಾಗೂ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಜೀವನೋಪಾಯ ಸೇವಾ ಕೇಂದ್ರಗಳನ್ನು ಆರಂಭಿಸಲಾಗುತ್ತಿದೆ ಎಂದು ಜಿಲ್ಲಾ ವ್ಯವಸ್ಥಾಪಕ ಬಸವರಾಜ ಮೂಲಿಮನಿ ಹೇಳಿದರು.

ತಾಲೂಕಿನ ರಾಜೂರ ಗ್ರಾಮದ ಮಹಿಳಾ ವರ್ಕ್‌ಶೆಡ್ ಸಭಾಂಗಣದಲ್ಲಿ ಸಂಜೀವಿನಿ ಯೋಜನೆಯಡಿ ರಾಜೂರ, ರಾಮಪುರ, ಗೋಗೇರಿ ಹಾಗೂ ದಿಂಡೂರ ಗ್ರಾಮಗಳ ಸಮಗ್ರ ಕೃಷಿಗಾಗಿ ಸ್ಥಾಪಿಸಿರುವ ಜೀವನೋಪಾಯ ಸೇವಾ ಕೇಂದ್ರ, ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನ (ಸಂಜೀವಿನಿ) ಅಡಿಯಲ್ಲಿ ರೈತರು ಹಾಗೂ ಸ್ವ-ಸಹಾಯ ಗುಂಪುಗಳಿಗೆ ಕೃಷಿ ತಂತ್ರಜ್ಞಾನ, ಕೃಷಿ ಯಂತ್ರೋಪಕರಣಗಳ ಬಾಡಿಗೆ, ತರಬೇತಿ ಮತ್ತು ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಜೀವನೋಪಾಯ ಸೇವಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ.

ರಾಜ್ಯದ ಮೊದಲ ಕೇಂದ್ರ ಉಡುಪಿಯ ಅಲೆವೂರಿನಲ್ಲಿ ಆರಂಭವಾಗಿದ್ದು, ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗಲೆಂದು ಸಂಜೀವಿನಿ ಒಕ್ಕೂಟದ ಮೂಲಕ ರಾಜೂರಿನಲ್ಲೂ ಕೇಂದ್ರ ಆರಂಭಿಸಲಾಗಿದೆ ಎಂದರು.

ಮುಖ್ಯ ಅತಿಥಿ ಮಡ್ಡೇಶ ಮಳ್ಳಿಮಾರ ಮಾತನಾಡಿ, ಕೃಷಿ ಯಂತ್ರೋಪಕರಣಗಳ ಬಾಡಿಗೆ, ಕೌಶಲ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳು, ಮಾರುಕಟ್ಟೆ ಜೋಡಣೆ ಮತ್ತು ಸ್ವ-ಸಹಾಯ ಗುಂಪುಗಳಿಗೆ ಆರ್ಥಿಕ ಹಾಗೂ ತಾಂತ್ರಿಕ ನೆರವು ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕೇಂದ್ರದ ಮೂಲಕ ಪಡೆದುಕೊಳ್ಳಬಹುದು ಎಂದರು.

ತಾಲೂಕು ಪಂಚಾಯಿತಿ ಯೋಜನಾಧಿಕಾರಿ ಅರವಿಂದ ಬಂಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗ್ರಾಮೀಣ ಜನರಿಗೆ ಸಂಜೀವಿನಿ ಒಕ್ಕೂಟ ವರದಾನವಾಗಿದೆ. ಸರ್ಕಾರದ ವಿವಿಧ ಯೋಜನೆಗಳ ಮೂಲಕ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಕಾರ್ಯ ನಡೆಯುತ್ತಿದೆ.

ಗ್ರಾಮೀಣ ಭಾಗದ ಜನರು ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜುಬೆದಾ ಬೇಗಂ ಹಾಗೂ ವಾಣಿಶ್ರೀ ಕುಲಕರ್ಣಿ ವಹಿಸಿದ್ದರು.

ಈ ಸಂದರ್ಭದಲ್ಲಿ ತಾಲೂಕು ಸಂಜೀವಿನಿ ಘಟಕದ ವಿರೇಶ್ ಬಳಿಗಾರ್, ಶಿದ್ಲಿಂಗಯ್ಯ ಶಿರೋಳ, ಅನಿಲ್ ಕುಮಾರ್, ಮಧುಮತಿ ಹಾಗೂ ಒಕ್ಕೂಟದ ಎಲ್ಲ ಎಂಬಿಕೆ, ಎಲ್‌ಸಿಆರ್‌ಪಿ, ಕೃಷಿ ಸಖಿ, ಪಶು ಸಖಿ, ಪಿಎಸ್‌ಗಳು ಉಪಸ್ಥಿತರಿದ್ದರು. ಒಕ್ಕೂಟದ ಎಂಬಿಕೆ ಶ್ರೀದೇವಿ ಹಳ್ಳದ ಕಾರ್ಯಕ್ರಮ ನಿರ್ವಹಿಸಿದರು. ಕಾವ್ಯ ಕೋರಿ ವಂದಿಸಿದರು.

# ಹೊರಗುತ್ತಿಗೆ ಸಿಬ್ಬಂದಿಗೆ ಕನಿಷ್ಠ ವೇತನ ಜಾರಿಗೆ ಆಗ್ರಹಿಸಿ ಮನವಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿವಿಧ ಕಲ್ಯಾಣ ಇಲಾಖೆಗಳು ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಳೆದ 15ರಿಂದ 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಹೊರಗುತ್ತಿಗೆ ಸಿಬ್ಬಂದಿಗೆ ಪರಿಷ್ಕೃತ ಕನಿಷ್ಠ ವೇತನ ಜಾರಿಗೊಳಿಸಿ, ಉದ್ಯೋಗ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿ ಕ್ಷೇತ್ರದ ಶಾಸಕ ಕೆ. ನೇಮಿರಾಜ್ ನಾಯ್ಕ್ ಅವರಿಗೆ ಮನವಿ ಸಲ್ಲಿಸಲಾಯಿತು.

ಹೊರಗುತ್ತಿಗೆ ನೌಕರರ ಸಂಘಟನೆಯ ಪರವಾಗಿ ಜನವಾದಿ ಮಹಿಳಾ ಸಂಘದ ಜಿಲ್ಲಾ ಸಂಚಾಲಕಿ ಸರ್ದಾರ್ ಹುಲಿಗೆಮ್ಮ ಮಾತನಾಡಿ, ಅಡುಗೆಯವರು, ಸಹಾಯಕರು, ನೈರ್ಮಲ್ಯ ಕಾವಲುಗಾರರು, ಡಿ-ಗ್ರೂಪ್ ಅಟೆಂಡರ್‌ಗಳು, ಕಂಪ್ಯೂಟರ್ ಹಾಗೂ ಡೇಟಾ ಎಂಟ್ರಿ ಆಪರೇಟರ್‌ಗಳು ಮತ್ತು ಅತಿಥಿ ಶಿಕ್ಷಕರು ಹಲವು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ರಾಜ್ಯ ಸರ್ಕಾರ ಹಾಗೂ ಕಾರ್ಮಿಕ ಇಲಾಖೆ ಮೇ 22, 2026ರಂದು ಹೊರಡಿಸಿರುವ ಪರಿಷ್ಕೃತ ಕನಿಷ್ಠ ವೇತನವನ್ನು ತಕ್ಷಣ ಜಾರಿಗೊಳಿಸಿ, ಪ್ರತಿಯೊಬ್ಬ ಸಿಬ್ಬಂದಿಗೆ ತಿಂಗಳಿಗೆ ಕನಿಷ್ಠ ₹36 ಸಾವಿರ ವೇತನ ನೀಡಬೇಕು ಎಂದು ಒತ್ತಾಯಿಸಿದರು.

ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ನಿವೃತ್ತಿಯವರೆಗೆ ಉದ್ಯೋಗ ಭದ್ರತೆ ಒದಗಿಸಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸ್ಥಳಗಳಲ್ಲಿಯೇ ಕಾಯಂಗೊಳಿಸಬೇಕು. ಗುತ್ತಿಗೆದಾರರ ಮಧ್ಯಸ್ಥಿಕೆ ಇಲ್ಲದೆ ಇಲಾಖೆಯಿಂದಲೇ ನೇರವಾಗಿ ವೇತನ ಪಾವತಿಸಬೇಕು ಎಂದು ಆಗ್ರಹಿಸಿದರು.

ಹೋರಾಟ ಸಮಿತಿಯ ಮುಖಂಡ ನಾಗರಾಜ್ ನಾಯ್ಕ್ ಮಾತನಾಡಿ, ಹೊರಗುತ್ತಿಗೆ ಸಿಬ್ಬಂದಿಗೆ ವೇತನ ಚೀಟಿ, ನೇಮಕಾತಿ ಆದೇಶ, ಗುರುತಿನ ಚೀಟಿ, ಸೇವಾ ಪ್ರಮಾಣಪತ್ರ, ಇಎಸ್‌ಐ ಹಾಗೂ ಪಿಎಫ್ ಸೌಲಭ್ಯಗಳನ್ನು ಕಡ್ಡಾಯವಾಗಿ ಒದಗಿಸಬೇಕು. ವಾರಕ್ಕೆ ಒಂದು ದಿನ ರಜೆ, ನಿಗದಿತ ಕೆಲಸದ ಅವಧಿ ಕಲ್ಪಿಸಬೇಕು.

ಕರ್ತವ್ಯದ ವೇಳೆ ಅಪಘಾತ ಸಂಭವಿಸಿದರೆ ಸೂಕ್ತ ಚಿಕಿತ್ಸೆ ಹಾಗೂ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಹೊರಗುತ್ತಿಗೆ ಸಿಬ್ಬಂದಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ತತ್ವ ಜಾರಿಗೊಳಿಸಿ, ಅವರನ್ನು ಕಾಯಂಗೊಳಿಸಲು ಅಗತ್ಯವಾದ ಕಾನೂನು ರೂಪಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಹೊರಗುತ್ತಿಗೆ ನೌಕರರ ಸಂಘದ ತಾಲ್ಲೂಕು ಮುಖಂಡರಾದ ಕೆ. ಹುಲಿಗೆಮ್ಮ, ಸದಸ್ಯರಾದ ಕೊಟ್ರಮ್ಮ, ಮರುಳಸಿದ್ದಮ್ಮ, ಮಂಗಳ, ಮಾಲಾಶ್ರೀ, ಹನುಮಕ್ಕ, ಪಲ್ಲವಿ, ಜ್ಯೋತಿ, ಪಕುರಮ್ಮ, ಬೇಬಿಬಾಯಿ, ನೇತ್ರಮ್ಮ, ಸವಿತಾ, ಮಾಳಮ್ಮ, ಭಾಗ್ಯಮ್ಮ, ಶಶಿಕಲಾ, ಶೀಲಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸೂರಣಗಿಯಲ್ಲಿ ಯಲ್ಲಮ್ಮದೇವಿ ಮೂರ್ತಿ ಮೆರವಣಿಗೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಸೂರಣಗಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಯಲ್ಲಮ್ಮದೇವಿ ದೇವಸ್ಥಾನದ ಮೂರ್ತಿ ಪ್ರಾಣಪ್ರತಿಷ್ಠಾಪನೆ ಹಾಗೂ ಕಳಸಾರೋಹಣದ ಅಂಗವಾಗಿ ಸೋಮವಾರ ನಡೆದ ಮೂರ್ತಿ ಮೆರವಣಿಗೆ ಭಕ್ತಿಭಾವ ಹಾಗೂ ವೈಭವದಿಂದ ನೆರವೇರಿತು.

ಬೆಳಿಗ್ಗೆ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಶ್ರೀ ಯಲ್ಲಮ್ಮದೇವಿಯ ನೂತನ ಮೂರ್ತಿ, ಕಳಸ, ಕುಂಭ ಹಾಗೂ ಹಾಲಿನ ಬಿಂದಿಗೆಗಳನ್ನು ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು. ಡೊಳ್ಳಿನ ನಾದ, ಕುದುರೆಗಾರರ ಕುಣಿತ, ಭಜನಾ ತಂಡಗಳ ಭಕ್ತಿಗೀತೆ ಹಾಗೂ ವಿವಿಧ ವಾದ್ಯಗಳ ಸದ್ದು ಮೆರವಣಿಗೆಗೆ ವಿಶೇಷ ಮೆರುಗು ನೀಡಿತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿದ ಮೆರವಣಿಗೆಯಲ್ಲಿ ಮಹಿಳೆಯರು, ಯುವಕರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಮಹಿಳೆಯರು ಪೂರ್ಣಕುಂಭ ಹೊತ್ತು ಸಾಗಿದರೆ, ಭಕ್ತರು ದೇವಿಯ ನಾಮಸ್ಮರಣೆ, ಭಜನೆ ಹಾಗೂ ಜಯಘೋಷಗಳನ್ನು ಮೊಳಗಿಸಿದರು. ಮನೆಗಳ ಮುಂದೆ ರಂಗೋಲಿ ಬಿಡಿಸಿ, ತಳಿರು-ತೋರಣಗಳಿಂದ ಅಲಂಕರಿಸಿದ್ದ ಗ್ರಾಮಸ್ಥರು ಮೆರವಣಿಗೆಯನ್ನು ಸಂಭ್ರಮದಿಂದ ಸ್ವಾಗತಿಸಿದರು.

ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಧರ್ಮಾಭಿಮಾನಿ ಐ.ಎಸ್. ಪೂಜಾರ, ಯಲ್ಲಮ್ಮದೇವಿಯ ನೂತನ ದೇವಸ್ಥಾನ ನಿರ್ಮಾಣ ಹಾಗೂ ಮೂರ್ತಿ ಪ್ರತಿಷ್ಠಾಪನೆ ಗ್ರಾಮಸ್ಥರ ಭಕ್ತಿ, ಶ್ರದ್ಧೆ ಮತ್ತು ಒಗ್ಗಟ್ಟಿನ ಪ್ರತೀಕವಾಗಿದೆ. ಇಂತಹ ಧಾರ್ಮಿಕ ಕಾರ್ಯಕ್ರಮಗಳು ಗ್ರಾಮದಲ್ಲಿ ಭಕ್ತಿ, ಸೌಹಾರ್ದ ಹಾಗೂ ಒಗ್ಗಟ್ಟನ್ನು ಮತ್ತಷ್ಟು ಬಲಪಡಿಸುತ್ತವೆ ಎಂದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಮೆರವಣಿಗೆ ಅಂತಿಮವಾಗಿ ದೇವಸ್ಥಾನಕ್ಕೆ ಆಗಮಿಸಿತು. ನಾಗರಾಜ ಹಾವಳಕೇರಿ, ಪ್ರಕಾಶ ಕಳ್ಳಿಹಾಳ, ಶಂಕರಪ್ಪ ದುರ್ಗದ, ಕುಮಾರ ಬೆಟಗೇರಿ, ದೇವಪ್ಪ ರಾವತರ, ರಾಜಶೇಖರ ಮೇಲ್ಮುರಿ, ವೀರಯ್ಯ ಕುಲಕರ್ಣಿ, ಚಂದ್ರಣ್ಣ ಶೀರನಳ್ಳಿ, ಶಶಿಕಾಂತ ದಾಸರ, ಉಮೇಶ ಕಲ್ಯಾಳ, ಮಂಜುನಾಥ ಹಾವಳಕೇರಿ, ಹುಸೇನಸಾಬ ಕೋಲಕಾರ, ಯಂಕಪ್ಪ ಲಮಾಣಿ, ಅಶೋಕ ಸೂರಣಗಿ, ವಿಜಯ ಕುರುಬರ, ಹನಮಂತಪ್ಪ ಬೆಟಗೇರಿ, ದೊಡ್ಡಬಸಪ್ಪ ದೊಡ್ಡಗ್ಗಣ್ಣವರ, ಉಮೇಶ ಕಳ್ಳಿಹಾಳ, ತಾವರೆಪ್ಪ ಲಮಾಣಿ, ತಾವರೆಪ್ಪ ಲಮಾಣಿ, ಪುಂಡಲೀಕ ಲಮಾಣಿ, ಶಿವಪ್ಪ ಲಮಾಣಿ ಸೇರಿದಂತೆ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಮಂಗಳವಾರ ನೆಗಳೂರಿನ ಶ್ರೀ ಗುರುಶಾಂತೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ವಿಶೇಷ ಪೂಜೆ, ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ಧರ್ಮಸಭೆ ನಡೆಯಲಿದೆ.

# ಜಯಘೋಷ, ಭಕ್ತಿಭಾವದ ನಡುವೆ ರಥ ಎಳೆದ ಮಹಿಳೆಯರು



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಕ್ತಿಭಾವ, ಜಯಘೋಷ ಹಾಗೂ ಮಹಿಳೆಯರ ಉತ್ಸಾಹಭರಿತ ಪಾಲ್ಗೊಳ್ಳುವಿಕೆಗೆ ಸಾಕ್ಷಿಯಾಗಿ ಸಮೀಪದ ಹಾಲಕೆರೆ ಗ್ರಾಮದ ಅನ್ನದಾನೇಶ್ವರ ಸಂಸ್ಥಾನಮಠದ ಲಿಂ. ಗುರು ಅನ್ನದಾನ ಸ್ವಾಮಿಗಳವರ 49ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಬೆಳ್ಳಿ ರಥೋತ್ಸವ ಸೋಮವಾರ ಸಂಜೆ ವೈಭವದಿಂದ ಜರುಗಿತು.

ಪುಣ್ಯಸ್ಮರಣೋತ್ಸವದ ಅಂಗವಾಗಿ ಮಹಿಳಾ ಆರೋಗ್ಯ ಶಿಬಿರ, ಉಡಿ ತುಂಬುವ ಸಮಾರಂಭ ಹಾಗೂ ಬೆಳ್ಳಿ ರಥೋತ್ಸವ ಆಯೋಜಿಸಲಾಗಿತ್ತು. ಹಾಲಕೆರೆ ಕ್ಷೇತ್ರಕ್ಕೆ ಆಗಮಿಸಿದ್ದ ವಿವಿಧ ಮಠಗಳ ಹಿರಿ-ಕಿರಿಯ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಹಾಲಕೆರೆ ಸಂಸ್ಥಾನಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಅವರ ನೇತೃತ್ವದಲ್ಲಿ ಬೆಳ್ಳಿ ರಥಕ್ಕೆ ವಿಶೇಷ ಪೂಜೆ ನೆರವೇರಿಸಲಾಯಿತು.

ಬಳಿಕ ಸಂಜೆ 6 ಗಂಟೆಗೆ ದಾವಣಗೆರೆ ಲೋಕಸಭಾ ಸದಸ್ಯೆ ಡಾ. ಪ್ರಭಾ ಮಲ್ಲಿಕಾರ್ಜುನ ಅವರು ಬೆಳ್ಳಿ ರಥೋತ್ಸವಕ್ಕೆ ಚಾಲನೆ ನೀಡಿದರು. ಚಾಲನೆ ದೊರೆಯುತ್ತಿದ್ದಂತೆ ಮಹಿಳೆಯರು ಹಾಗೂ ವಿದ್ಯಾರ್ಥಿನಿಯರು ಭಕ್ತಿಭಾವದಿಂದ ರಥದ ಹಗ್ಗ ಹಿಡಿದು ರಥವನ್ನು ಎಳೆದು ಸಂಭ್ರಮಿಸಿದರು.

ರಥ ಸಾಗುತ್ತಿದ್ದಂತೆ ಅನ್ನದಾನೇಶ್ವರ ಮಹಾರಾಜ್ ಕೀ ಜೈ, ಗುರು ಕುಮಾರೇಶ್ವರ ಮಹಾರಾಜ್ ಕೀ ಜೈ, ಲಿಂ. ಗುರು ಅನ್ನದಾನ ಸ್ವಾಮೀಜಿ ಕೀ ಜೈ, ಲಿಂ. ಅಭಿನವ ಅನ್ನದಾನ ಸ್ವಾಮೀಜಿ ಕೀ ಜೈ ಹಾಗೂ ಮುಪ್ಪಿನ ಬಸವಲಿಂಗ ಸ್ವಾಮೀಜಿ ಕೀ ಜೈ ಎಂಬ ಜಯಘೋಷಗಳು ಮೊಳಗಿದವು. ಭಕ್ತರ ಜಯಘೋಷದಿಂದ ಇಡೀ ಕ್ಷೇತ್ರವು ಆಧ್ಯಾತ್ಮಿಕ ವಾತಾವರಣದಲ್ಲಿ ಮಿಂದೆದ್ದಿತು.

ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಬೆಳ್ಳಿ ರಥ ಎಳೆದದ್ದು ರಥೋತ್ಸವದ ವಿಶೇಷ ಆಕರ್ಷಣೆಯಾಗಿತ್ತು. ಮಹಿಳೆಯರೊಂದಿಗೆ ವಿದ್ಯಾರ್ಥಿನಿಯರೂ ಉತ್ಸಾಹದಿಂದ ರಥ ಎಳೆದು ಭಕ್ತಿಭಾವ ಮೆರೆದರು. ಮಹಿಳೆಯರ ಶ್ರದ್ಧಾಭಕ್ತಿಯ ಪಾಲ್ಗೊಳ್ಳುವಿಕೆ ರಥೋತ್ಸವಕ್ಕೆ ಮತ್ತಷ್ಟು ಮೆರುಗು ತಂದಿತು.

ರಥೋತ್ಸವ ಯಶಸ್ವಿಯಾಗಿ ಪೂರ್ಣಗೊಂಡು ಬೆಳ್ಳಿ ರಥ ಸ್ವಸ್ಥಳಕ್ಕೆ ಮರಳಿದಾಗ ಭಕ್ತರು ಚಪ್ಪಾಳೆ ತಟ್ಟಿ ಸಂಭ್ರಮಿಸಿದರು. ಮಹಿಳೆಯರು ಹಾಗೂ ಭಕ್ತರು ರಥಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಶ್ರದ್ಧಾಭಕ್ತಿ ಸಮರ್ಪಿಸಿದರು.

ಗದಗ, ಧಾರವಾಡ, ಕೊಪ್ಪಳ, ಬಾಗಲಕೋಟೆ, ವಿಜಯನಗರ, ಬಳ್ಳಾರಿ, ರಾಯಚೂರು ಹಾಗೂ ದಾವಣಗೆರೆ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ರಥೋತ್ಸವದ ಹಿನ್ನೆಲೆಯಲ್ಲಿ ಹಾಲಕೆರೆ ಕ್ಷೇತ್ರವು ಭಕ್ತರಿಂದ ಕಿಕ್ಕಿರಿದು, ಜಯಘೋಷಗಳಿಂದ ಮೊಳಗುತ್ತಿತ್ತು.

ಮಹಿಳೆಯರ ಭಕ್ತಿ, ವಿದ್ಯಾರ್ಥಿನಿಯರ ಉತ್ಸಾಹ ಹಾಗೂ ಭಕ್ತರ ಜಯಘೋಷಗಳ ನಡುವೆ ನಡೆದ ಹಾಲಕೆರೆ ಬೆಳ್ಳಿ ರಥೋತ್ಸವವು ಲಿಂ. ಗುರು ಅನ್ನದಾನ ಸ್ವಾಮಿಗಳವರ ಪುಣ್ಯಸ್ಮರಣೋತ್ಸವಕ್ಕೆ ಭಕ್ತಿಯ ಮೆರುಗು ನೀಡಿತು.

# ಹಿರಿಯ ನಾಗರಿಕರ ಸಂಘಕ್ಕೆ ಜಾಗೆ ನೀಡಲು ಆಗ್ರಹ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲ್ಲೂಕು ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ಕಚೇರಿ ಹಾಗೂ ವಿವಿಧ ಚಟುವಟಿಕೆಗಳನ್ನು ನಡೆಸಲು ಪುರಸಭೆಯಿಂದ ಸೂಕ್ತ ಜಾಗೆ ಮಂಜೂರು ಮಾಡಬೇಕು ಎಂದು ಆಗ್ರಹಿಸಿ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಪುರಸಭೆ ಮುಖ್ಯಾಧಿಕಾರಿ ಪಿ.ಕೆ. ಗುಡದಾರಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ತಾಲ್ಲೂಕಿನಲ್ಲಿ ಸಂಘವು ಸಾವಿರಾರು ಸದಸ್ಯರನ್ನು ಹೊಂದಿದ್ದು, ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಹಿತಾಸಕ್ತಿಗಾಗಿ ಹಲವು ವರ್ಷಗಳಿಂದ ಸಾಮಾಜಿಕ ಹಾಗೂ ಸೇವಾ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದೆ. ಪ್ರತಿ ತಿಂಗಳು ಸಭೆ, ಉಚಿತ ಆರೋಗ್ಯ ತಪಾಸಣಾ ಶಿಬಿರ, ಯೋಗ ಶಿಬಿರ, ಜಾಗೃತಿ ಕಾರ್ಯಕ್ರಮ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಆದರೆ ಸಂಘದ ಸ್ವಂತ ಕಚೇರಿ ಹಾಗೂ ಕಾರ್ಯಕ್ರಮಗಳನ್ನು ನಡೆಸಲು ಸೂಕ್ತ ಜಾಗೆಯಿಲ್ಲದೆ ತೊಂದರೆಯಾಗುತ್ತಿದೆ ಎಂದರು.

ಹಿರಿಯ ನಾಗರಿಕರು ನಿವೃತ್ತ ಜೀವನವನ್ನು ಆರೋಗ್ಯಕರ ಹಾಗೂ ಕ್ರಿಯಾಶೀಲವಾಗಿ ಕಳೆಯಲು ಸಂಘದ ವತಿಯಿಂದ ಹಲವು ಉಪಯುಕ್ತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಆರೋಗ್ಯ, ಯೋಗ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ಸಾರ್ವಜನಿಕರಿಗೂ ಅನುಕೂಲವಾಗುವಂತೆ ನಡೆಸಲು ಶಾಶ್ವತ ಸ್ಥಳದ ಅಗತ್ಯವಿದೆ. ಹೀಗಾಗಿ ಪಟ್ಟಣದಲ್ಲಿ ನಾಗರಿಕ ಸೌಲಭ್ಯಗಳಿಗಾಗಿ ಪುರಸಭೆ ಕಾಯ್ದಿರಿಸಿರುವ ಸೂಕ್ತ ಜಾಗೆಯನ್ನು ಸಂಘಕ್ಕೆ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.

ಹಿರಿಯ ನಾಗರಿಕರ ಅನುಕೂಲ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಮನವಿಯನ್ನು ಪರಿಗಣಿಸಿ ಶೀಘ್ರ ಜಾಗೆ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಸದಸ್ಯರು ಮುಖ್ಯಾಧಿಕಾರಿಗಳಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಚಂಬಣ್ಣ ಬಾಳಿಕಾಯಿ, ಮಲ್ಲಸಮುದ್ರ, ಐ.ಎಸ್. ಮಡಿವಾಳರ, ಸೂಗೀರಪ್ಪ ವಾಲಿ, ಜಾವೂರ ಹಾಗೂ ನಿವೃತ್ತ ಶಿಕ್ಷಕ ಪವಾಡಶೆಟ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ನಿಧನ

**ಫಕ್ಕೀರಪ್ಪ ಕುಷ್ಟಗಿ**



**ಗದಗ:** ಜಿಲ್ಲೆಯ ರೋಣ ತಾಲೂಕಿನ ಕೊತಬಾಳ ಗ್ರಾಮದ ನಿವಾಸಿ ಫಕ್ಕೀರಪ್ಪ ಕಳಕಪ್ಪ ಕುಷ್ಟಗಿ (80) ನಿಧನರಾದರು.
ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವಿದೆ.

## ಬಿಸಿಎ ನಾಲ್ಕನೇ ಸೆಮಿಸ್ಟರ್‌ನಲ್ಲಿ ಮನೋರಮಾ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ







**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮನೋರಮಾ ಮಹಾವಿದ್ಯಾಲಯದ ಬಿಸಿಎ ಕೋರ್ಸ್‌ನ ನಾಲ್ಕನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿನಿಯರು ಉತ್ತಮ ಸಾಧನೆ ಮಾಡಿದ್ದು, ಐವರು ವಿದ್ಯಾರ್ಥಿನಿಯರು ಮೊದಲ ಐದು ಸ್ಥಾನಗಳನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಕುಮಾರಿ ಮೆಹೆಕ ದುಕಾಂದಾರ 575 ಅಂಕ ಪಡೆದು ಪ್ರಥಮ ಸ್ಥಾನ, ಕುಮಾರಿ ಮೇಘಾ ಅಂಗಡಿ 559 ಅಂಕ ಪಡೆದು ದ್ವಿತೀಯ ಸ್ಥಾನ, ಕುಮಾರಿ ಮೆಹತಾಬಾನು ಕಾತರಕಿ 533 ಅಂಕ ಪಡೆದು ತೃತೀಯ ಸ್ಥಾನ, ಕುಮಾರಿ ಸ್ವಾತಿ ಚುದಗುಂಡ 525 ಅಂಕ ಪಡೆದು ನಾಲ್ಕನೇ ಸ್ಥಾನ ಹಾಗೂ ಕುಮಾರಿ ಸೌಮ್ಯ ಬಣ್ಣದಬಾವಿ 521 ಅಂಕ ಪಡೆದು ಐದನೇ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿನಿಯರ ಸಾಧನೆಗೆ ಸಂಸ್ಥೆಯ ಚೇರ್ಮನ್ ಎನ್.ಎಂ. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಂಯೋಜಕಿ ಪ್ರೊ. ಸವಿತಾ ಪೂಜಾರ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ, ಮುಂದಿನ ಶೈಕ್ಷಣಿಕ ಬದುಕಿಗೆ ಶುಭ ಹಾರೈಸಿದ್ದಾರೆ.

### ₹27 ಕೋಟಿ ಖರ್ಚು ಮಾಡುವ ಬದಲು ಬೆಳೆ ನಷ್ಟ ಪರಿಹಾರ, ಸಾಲ ಸೌಲಭ್ಯ ಕಲ್ಪಿಸಲು ಒತ್ತಾಯ

## ಮೋಡ ಬಿತ್ತನೆಗಿಂತ ರೈತರಿಗೆ ನೇರ ಪರಿಹಾರ ನೀಡಿ

**ವಿಜಯಸಾಕ್ಷಿ ಸುದ್ದಿ, ಡಂಬಳ**



ರಾಜ್ಯದಲ್ಲಿ ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ ಸರ್ಕಾರ ಸುಮಾರು ₹27 ಕೋಟಿ ವೆಚ್ಚದಲ್ಲಿ ಮೋಡ ಬಿತ್ತನೆ ಕೈಗೊಳ್ಳಲು ಮುಂದಾಗಿರುವುದನ್ನು ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪಗೌಡ್ರ ಕರಮಡಿ ವಿರೋಧಿಸಿದ್ದಾರೆ. ಡಂಬಳ ಹೋಬಳಿಯ ಪೇಠಾ ಆಲೂರ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇತ್ತೀಚೆಗೆ ನಡೆದ ಎಂಟು ದಿನಗಳ ವಿಧಾನಮಂಡಲ ಅಧಿವೇಶನದಲ್ಲಿ ರಾಜ್ಯದ ರೈತರ ಸಮಸ್ಯೆಗಳು, ಮಳೆ ಕೊರತೆ ಹಾಗೂ ಬರ ಪರಿಸ್ಥಿತಿಯ ಕುರಿತು ಸಮರ್ಪಕವಾಗಿ ಧ್ವನಿ ಎತ್ತಿ, ರೈತರ ನೆರವಿಗೆ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸುವಲ್ಲಿ ಶಾಸಕರು ವಿಫಲರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಳೆ ಕೊರತೆಯಿಂದ ಬೆಳೆಗಳು ಒಣಗುತ್ತಿದ್ದು, ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ರೈತರಿಗೆ ನೇರ ಪರಿಹಾರ ನೀಡುವುದು ಸರ್ಕಾರದ ಮೊದಲ ಆದ್ಯತೆಯಾಗಬೇಕು. ಆದರೆ ₹27 ಕೋಟಿ ವೆಚ್ಚ ಮಾಡಿ ಮೋಡ ಬಿತ್ತನೆ ಮಾಡುವ ನಿರ್ಧಾರ ಎಷ್ಟರ ಮಟ್ಟಿಗೆ ಪರಿಣಾಮಕಾರಿ ಎಂಬುದನ್ನು ಸರ್ಕಾರ ಮರುಪರಿಶೀಲಿಸಬೇಕು ಎಂದು ಹೇಳಿದರು. ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಮೋಡ ಬಿತ್ತನೆಗೆ ಸುಮಾರು ₹27 ಕೋಟಿ ವೆಚ್ಚದಲ್ಲಿ 60 ದಿನಗಳ ಕಾರ್ಯಾಚರಣೆ ನಡೆಸುವ ಕುರಿತು ಹೇಳಿಕೆ ನೀಡಿದ್ದಾರೆ. ಹಿಂದೆಯೂ ರಾಜ್ಯದಲ್ಲಿ ಮೋಡ ಬಿತ್ತನೆ ಪ್ರಯೋಗಗಳು ನಡೆದಿದ್ದು, ನಿರೀಕ್ಷಿತ ಮಟ್ಟದಲ್ಲಿ ಫಲಿತಾಂಶ ದೊರೆತಿಲ್ಲ. ಹೀಗಾಗಿ ಮತ್ತೊಮ್ಮೆ ಸಾರ್ವಜನಿಕರ ತೆರಿಗೆ ಹಣವನ್ನು ಇಂತಹ ಪ್ರಯೋಗಕ್ಕೆ ಬಳಸುವುದು ಸೂಕ್ತವಲ್ಲ ಎಂದು ಯಲ್ಲಪ್ಪಗೌಡ್ರ ಕರಮಡಿ ಹೇಳಿದರು. ಮೋಡ ಬಿತ್ತನೆಯ ಯಶಸ್ಸಿನ ಪ್ರಮಾಣ ಕಡಿಮೆ ಇರುವ ಸಂದರ್ಭದಲ್ಲಿ ₹27 ಕೋಟಿಯನ್ನು ಮಳೆ ಕೊರತೆಯಿಂದ ಹಾನಿಗೊಳಗಾದ ರೈತರಿಗೆ ನೇರ ಪರಿಹಾರವಾಗಿ ನೀಡಬೇಕು. ರಾಜ್ಯದ ಮಳೆ ಕೊರತೆಯನ್ನು ವೈಜ್ಞಾನಿಕವಾಗಿ ಪರಿಶೀಲಿಸಿ ಅಗತ್ಯವಿರುವ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿ, ಬೆಳೆ ನಷ್ಟ ಪರಿಹಾರ, ಸಾಲ ಸೌಲಭ್ಯ ಹಾಗೂ ಇತರ ನೆರವುಗಳನ್ನು ತುರ್ತಾಗಿ ಒದಗಿಸಬೇಕು ಎಂದು ಒತ್ತಾಯಿಸಿದರು.

> ರೈತರ ಕಣ್ಣೀರು ಒರೆಸುವುದು ಸರ್ಕಾರದ ಮೊದಲ ಕರ್ತವ್ಯ. ಮೋಡ ಬಿತ್ತನೆಗೆ ಹಣ ವ್ಯಯಿಸುವ ಬದಲು ಸಂಕಷ್ಟದಲ್ಲಿರುವ ರೈತರಿಗೆ ನೇರ ಪರಿಹಾರ ನೀಡಬೇಕು.
> **- ಯಲ್ಲಪ್ಪಗೌಡ್ರ ಕರಮಡಿ,** ಜಿಲ್ಲಾಧ್ಯಕ್ಷ, ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘ, ಗದಗ.

### ಸಾವಿರಾರು ಮುಸ್ಲಿಂ ಬಾಂಧವರ ಭಕ್ತಿಸಡಗರದ ಮೆರವಣಿಗೆ | ಭಾವೈಕ್ಯತೆ, ಸಹಬಾಳ್ವೆಗೆ ಮೊಳಗಿದ ಕರೆ

# ಶಾಂತಿಯ ಸಂದೇಶದೊಂದಿಗೆ ಮೊಳಗಿದ ಈದ್ ಮಿಲಾದ್

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪ್ರವಾದಿ ಹಜರತ್ ಮಹಮ್ಮದ್ ಅವರ ಜನ್ಮದಿನದ ಸ್ಮರಣಾರ್ಥ ಆಚರಿಸುವ ಈದ್ ಮಿಲಾದ್-ಉನ್-ನಬಿ ಅಂಗವಾಗಿ ಪಟ್ಟಣದಲ್ಲಿ ಬುಧವಾರ ಸಾವಿರಾರು ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿ ಹಾಗೂ ಸಡಗರದಿಂದ ಅದ್ದೂರಿ ಧಾರ್ಮಿಕ ಮೆರವಣಿಗೆ ನಡೆಸಿದರು. ಧಾರ್ಮಿಕ ಗೀತೆ, ಘೋಷಣೆಗಳು ಹಾಗೂ ಬಣ್ಣಬಣ್ಣದ ಅಲಂಕಾರಗಳಿಂದ ಪಟ್ಟಣದ ಪ್ರಮುಖ ಬೀದಿಗಳು ಹಬ್ಬದ ಸಂಭ್ರಮದಲ್ಲಿ ಮಿಂದೆದ್ದವು.

ಅಂಜುಮನ್-ಎ-ಇಸ್ಲಾಂ ಕಮಿಟಿ, ದರ್ಗಾ ಕಮಿಟಿ ಹಾಗೂ ಮುಸ್ಲಿಂ ಸಮಾಜದ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಮೆರವಣಿಗೆ ಪಟ್ಟಣದ ಭಾವೈಕ್ಯತೆಯ ಪ್ರತೀಕವಾಗಿರುವ ದೂದಪೀರಾಂ ದರ್ಗಾದಿಂದ ಆರಂಭವಾಯಿತು. ಪ್ರವಾದಿಯ ಸಂದೇಶ ಸಾರುವ ಗೀತೆಗಳು ಹಾಗೂ ಧಾರ್ಮಿಕ ಘೋಷಣೆಗಳೊಂದಿಗೆ ಬಜಾರ ರಸ್ತೆ, ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಸಾಗಿತು.

ಯುವಕರು, ಹಿರಿಯರು ಸೇರಿದಂತೆ ವಿವಿಧ ವಯೋಮಾನದ ಸಾವಿರಾರು ಜನರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಶಾಂತಿ, ಸೌಹಾರ್ದತೆ ಹಾಗೂ ಸಹಬಾಳ್ವೆಯ ಸಂದೇಶ ಸಾರಿದ ಮೆರವಣಿಗೆ ಪುನಃ ದೂದಪೀರಾಂ ದರ್ಗಾಕ್ಕೆ ಆಗಮಿಸಿ ಸಮಾಪ್ತಿಗೊಂಡಿತು.

ಮೆರವಣಿಗೆಗೆ ಚಾಲನೆ ನೀಡಿ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ಪ್ರವಾದಿ ಮಹಮ್ಮದ್ ಅವರು ಜಾತಿ, ಮತ, ಪಂಥದ ಗಡಿಗಳನ್ನು ಮೀರಿ ಮಾನವೀಯ ಮೌಲ್ಯಗಳಿಗೆ ಮಹತ್ವ ನೀಡಿದ ಮಹಾನ್ ವ್ಯಕ್ತಿ. ಅವರು ಸಾರಿದ ಶಾಂತಿ, ದಯೆ, ಸಹಿಷ್ಣುತೆ ಹಾಗೂ ಸಹಬಾಳ್ವೆಯ ಸಂದೇಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಈದ್ ಮಿಲಾದ್ ಅಂಗವಾಗಿ ಪಟ್ಟಣದ ಮಸೀದಿಗಳು ಹಾಗೂ ಪ್ರಮುಖ ಸ್ಥಳಗಳನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಕುರಾನ್ ಪಠಣ, ಧಾರ್ಮಿಕ ಪ್ರವಚನ, ದಾನಧರ್ಮ ಹಾಗೂ ಸಿಹಿ-ಭಕ್ಷ್ಯ ವಿತರಣೆ ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳು ನಡೆದವು.


ಮೆರವಣಿಗೆ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಸೂಕ್ತ ಬಂದೋಬಸ್ತ್ ಕಲ್ಪಿಸಿತ್ತು. ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಥೋಡ, ಪ್ರಭಾರಿ ಪಿಎಸ್‌ಐ ರಮಾಕಾಂತ ಗುಗ್ಗರಿ ಸೇರಿದಂತೆ ಪೊಲೀಸ್ ಸಿಬ್ಬಂದಿ ಬಂದೋಬಸ್ತ್‌ನಲ್ಲಿ ಕರ್ತವ್ಯ ನಿರ್ವಹಿಸಿದರು.

ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ, ದೂದನಾನಾ ದರ್ಗಾ ಸಮಿತಿ ಅಧ್ಯಕ್ಷ ಸುಲೇಮಾನ ಕಣಕೆ, ಪುರಸಭೆ ಮಾಜಿ ಉಪಾಧ್ಯಕ್ಷರಾದ ದಾದಾಪೀರ ಮುಚ್ಚಾಲೆ, ಫಿರೋಜ್ ಆಡೂರ, ಮಾಜಿ ಸದಸ್ಯರಾದ ಎಸ್.ಕೆ. ಹವಾಲ್ದಾರ, ಮುಸ್ತಾಕ್‌ಅಹ್ಮದ್ ಶಿರಹಟ್ಟಿ, ಸಿಕಂದರ ಕಣಕೆ, ವೀರಕನ್ನಡಿಗ ಟಿಪ್ಪು ಸೇನೆ ಅಧ್ಯಕ್ಷ ಜಾಕೀರಹುಸೇನ್ ಹವಾಲ್ದಾರ, ಅಂಜುಮನ್ ಕಮಿಟಿ ಉಪಾಧ್ಯಕ್ಷ ಅಬ್ದುಲ್ ಕರೀಂ ಸೂರಣಗಿ ಸೇರಿದಂತೆ ಸಮಾಜದ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

> ಪ್ರವಾದಿ ಮುಹಮ್ಮದ್ ಅವರ ಶಾಂತಿ, ದಯೆ, ಸಹಿಷ್ಣುತೆ ಹಾಗೂ ಸಹಬಾಳ್ವೆಯ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಅವರ ಜನ್ಮದಿನದ ಆಚರಣೆಗೆ ನಿಜವಾದ ಗೌರವ.
> **- ಜಿ.ಎಸ್. ಗಡ್ಡದೇವರಮಠ,** ಮಾಜಿ ಶಾಸಕ

### ಶಿಸ್ತು, ಏಕಾಗ್ರತೆ, ಕಠಿಣ ಪರಿಶ್ರಮ ರೂಢಿಸಿಕೊಳ್ಳಿ

# ಪದವಿ ದಿನಗಳ ಸದ್ಬಳಕೆಯೇ ಉಜ್ವಲ ಭವಿಷ್ಯಕ್ಕೆ ನಾಂದಿ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿ ಜೀವನ ಹಾಗೂ ಪದವಿ ಶಿಕ್ಷಣದ ಅವಧಿ ವ್ಯಕ್ತಿಯ ಭವಿಷ್ಯ ರೂಪಿಸುವ ಅತ್ಯಂತ ಮಹತ್ವದ ಘಟ್ಟವಾಗಿದೆ. ಈ ಅಮೂಲ್ಯ ಸಮಯವನ್ನು ಸದುಪಯೋಗಪಡಿಸಿಕೊಂಡು ಸತತ ಪರಿಶ್ರಮ ಹಾಗೂ ಏಕಾಗ್ರತೆಯಿಂದ ಅಧ್ಯಯನದಲ್ಲಿ ತೊಡಗಿಸಿಕೊಂಡರೆ ಉನ್ನತ ಸಾಧನೆ ಮಾಡಲು ಸಾಧ್ಯ ಎಂದು ನಿವೃತ್ತ ಪ್ರಾಂಶುಪಾಲ ಎಲ್.ಎಲ್. ಗುಳೇದಗುಡ್ಡ ಹೇಳಿದರು.

ನರೇಗಲ್ ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐಕ್ಯೂಎಸಿ ಆಶ್ರಯದಲ್ಲಿ ಆಯೋಜಿಸಿದ್ದ ವಿವಿಧ ವಿಷಯಗಳ ಸರಣಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕಾಲೇಜಿನಲ್ಲಿ ಆಯೋಜಿಸುವ ಕಾರ್ಯಾಗಾರಗಳು ವಿದ್ಯಾರ್ಥಿಗಳನ್ನು ಕೇವಲ ಪದವೀಧರರನ್ನಾಗಿ ಮಾಡುವುದಷ್ಟೇ ಅಲ್ಲದೆ, ಉದ್ಯೋಗಾರ್ಹ ಹಾಗೂ ಸಾಮಾಜಿಕ ಜವಾಬ್ದಾರಿಯುತ ವ್ಯಕ್ತಿಗಳನ್ನಾಗಿ ರೂಪಿಸಲು ಸಹಕಾರಿಯಾಗುತ್ತವೆ. ಸರ್ಕಾರಿ ಶಿಕ್ಷಣ ಸಂಸ್ಥೆಗಳು ಪಠ್ಯಕ್ರಮಕ್ಕೆ ಸೀಮಿತವಾಗದೆ, ಪ್ರಸ್ತುತ ಉದ್ಯೋಗ ಮಾರುಕಟ್ಟೆಯ ಅಗತ್ಯಗಳಿಗೆ ತಕ್ಕಂತೆ ಗುಣಮಟ್ಟದ ಕಾರ್ಯಾಗಾರಗಳನ್ನು ನಿರಂತರವಾಗಿ ಆಯೋಜಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುತ್ತಿವೆ ಎಂದರು.

ತಜ್ಞರ ಮಾರ್ಗದರ್ಶನದಲ್ಲಿ ವಿಷಯವಾರು ಮಾಹಿತಿಯನ್ನು ಪರಿಣಾಮಕಾರಿಯಾಗಿ ಕಲಿಯಲು ಕಾರ್ಯಾಗಾರಗಳು ನೆರವಾಗುತ್ತವೆ. ತಂತ್ರಜ್ಞಾನ, ಕಲೆ, ಸಂಶೋಧನೆ ಸೇರಿದಂತೆ ವಿವಿಧ ಕ್ಷೇತ್ರಗಳ ಕುರಿತು ನಡೆಯುವ ಕಾರ್ಯಾಗಾರಗಳು ವಿದ್ಯಾರ್ಥಿಗಳಲ್ಲಿನ ಕೌಶಲ್ಯದ ಕೊರತೆ ನೀಗಿಸುವುದರ ಜತೆಗೆ ಹೊಸ ವಿಚಾರಗಳನ್ನು ಪ್ರಯೋಗಿಸುವ ಧೈರ್ಯ ಹಾಗೂ ಉದ್ಯೋಗ ಸಂದರ್ಶನಗಳನ್ನು ಎದುರಿಸುವ ಆತ್ಮವಿಶ್ವಾಸ ಹೆಚ್ಚಿಸುತ್ತವೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಕಸ್ತೂರವ್ವ ದಳವಾಯಿ ಮಾತನಾಡಿ, ಕೇವಲ ಪಠ್ಯಪುಸ್ತಕದ ಜ್ಞಾನ ಹಾಗೂ ಅಂಕಪಟ್ಟಿಗಳು ವಿದ್ಯಾರ್ಥಿಯ ಭವಿಷ್ಯ ನಿರ್ಧರಿಸಲು ಸಾಧ್ಯವಿಲ್ಲ. ತರಗತಿಯ ನಾಲ್ಕು ಗೋಡೆಗಳಾಚೆಗಿನ ಪ್ರಾಯೋಗಿಕ ಜ್ಞಾನ ಹಾಗೂ ಉದ್ಯಮ ರಂಗದ ವಾಸ್ತವ ಅಗತ್ಯತೆಗಳನ್ನು ಅರಿಯುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಕಾಲೇಜುಗಳಲ್ಲಿ ನಿಯಮಿತವಾಗಿ ಆಯೋಜಿಸುವ ಕಾರ್ಯಾಗಾರಗಳು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ವೃತ್ತಿ ಬದುಕಿಗೆ ಭದ್ರ ಬುನಾದಿ ಹಾಕುತ್ತವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಐಕ್ಯೂಎಸಿ ಸಂಚಾಲಕಿ ಜಯಶ್ರೀ ಮುತಗಾರ ಮಾತನಾಡಿ, ಪದವಿ ಹಂತದ ದಿನಗಳು ಯುವಜನರ ಬದುಕಿನ ಗತಿಯನ್ನು ನಿರ್ಧರಿಸುತ್ತವೆ. ಸಾಮಾಜಿಕ ಜಾಲತಾಣ ಹಾಗೂ ಅನಗತ್ಯ ಚಟುವಟಿಕೆಗಳಿಗೆ ಸಮಯ ವ್ಯರ್ಥ ಮಾಡದೆ, ದಿನನಿತ್ಯದ ಓದಿಗೆ ನಿಗದಿತ ಸಮಯ ಮೀಸಲಿಡುವ ಶಿಸ್ತು ಬೆಳೆಸಿಕೊಳ್ಳಬೇಕು. ಕಾಲೇಜಿನಲ್ಲಿ ದೊರೆಯುವ ಶೈಕ್ಷಣಿಕ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸಾಧನೆ ಮಾಡಿ ಹೆತ್ತವರಿಗೆ ಹಾಗೂ ಸಮಾಜಕ್ಕೆ ಕೀರ್ತಿ ತರಬೇಕು ಎಂದು ಕರೆ ನೀಡಿದರು.


ಕಾರ್ಯಾಗಾರದಲ್ಲಿ ಕನ್ನಡ ವಿಷಯದ ಕುರಿತು ಶಿವಮೂರ್ತಪ್ಪ ಕುರೇರ, ಇಂಗ್ಲಿಷ್ ಕುರಿತು ನಸರೀನಾಬಾನು ಜಮಾದರ, ಭೀಮಸೇನಾ ಉಗ್ರದ, ಗಣಿತದ ಕುರಿತು ಬಸವರಾಜ ಬಳಗಾನೂರ, ವಾಣಿಜ್ಯದ ಕುರಿತು ಮಹಾಂತೇಶ ಮುಧೋಳ, ಇತಿಹಾಸದ ಕುರಿತು ಮಾರುತಿ ಹಾಗೂ ಅರ್ಥಶಾಸ್ತ್ರದ ಕುರಿತು ರಾಜು ಬಿ.ಕೆ. ವಿಶೇಷ ಉಪನ್ಯಾಸ ನೀಡಿದರು.

ಈ ವೇಳೆ ಪ್ರಾಧ್ಯಾಪಕರಾದ ಎಸ್.ಎಸ್. ಸೂಡಿ, ಸುನಂದಾ ಮುಂಜಿ, ಅನಿಲಕುಮಾರ, ಶಿವಪ್ಪ ಕುರಬರ, ವಿರೂಪಾಕ್ಷ ಆರ್., ಅಯ್ಯಪ್ಪ, ಎನ್.ಎಸ್. ಹೊನ್ನೂರ, ವಿ.ಸಿ. ಇಲ್ಲೂರ, ಪಿ.ವೈ. ಶಾಸ್ತ್ರಿ, ಕೆ.ಎನ್. ಕಟ್ಟಿಮನಿ, ವಿವೇಕಾನಂದ ಹಿರೇಮಠ, ಶರಣಪ್ಪ ಚಿಕ್ಕೆನಕೊಪ್ಪ, ಶಂಕರಗೌಡ ಪಾಟೀಲ, ಎಂ.ಎಫ್. ತಹಶೀಲ್ದಾರ, ಎಸ್.ಆರ್. ನದಾಫ್ ಸೇರಿದಂತೆ ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

> ವಿದ್ಯಾರ್ಥಿ ಜೀವನ ಹಾಗೂ ಪದವಿ ಶಿಕ್ಷಣದ ಅವಧಿ ಭವಿಷ್ಯ ರೂಪಿಸುವ ಅಮೂಲ್ಯ ಕಾಲ. ಈ ಸಮಯವನ್ನು ಸದುಪಯೋಗಪಡಿಸಿಕೊಂಡು ಶಿಸ್ತು, ಏಕಾಗ್ರತೆ ಹಾಗೂ ಕಠಿಣ ಪರಿಶ್ರಮದಿಂದ ಅಧ್ಯಯನದಲ್ಲಿ ತೊಡಗಿಸಿಕೊಂಡರೆ ಉನ್ನತ ಸಾಧನೆ ಸಾಧ್ಯ.
> **- ಎಲ್.ಎಲ್. ಗುಳೇದಗುಡ್ಡ,** ನಿವೃತ್ತ ಪ್ರಾಂಶುಪಾಲ

# ವೃಕ್ಷಾರೋಪಣ ಅಭಿಯಾನದಲ್ಲಿ ಗದಗ ಬೆಟಗೇರಿ ರೋಟರಿ ಕ್ಲಬ್‌ಗೆ ದ್ವಿತೀಯ ಸ್ಥಾನ

**ವಿಜಯಸಾಕ್ಷಿ ಸುದ್ದಿ, ಗದಗ**




ಪರಿಸರ ಸಂರಕ್ಷಣೆಯ ನಿಟ್ಟಿನಲ್ಲಿ ರೋಟರಿ ಜಿಲ್ಲೆ 3170 ವತಿಯಿಂದ ಜುಲೈನಲ್ಲಿ ಹಮ್ಮಿಕೊಂಡಿದ್ದ ವೃಕ್ಷಾರೋಪಣ ಅಭಿಯಾನದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಗದಗ-ಬೆಟಗೇರಿ ರೋಟರಿ ಕ್ಲಬ್ ಜಿಲ್ಲೆಯಲ್ಲಿ ದ್ವಿತೀಯ ಸ್ಥಾನ ಪಡೆದು ಗದುಗಿನ ಕೀರ್ತಿ ಹೆಚ್ಚಿಸಿದೆ.

ಜುಲೈ 12ರಿಂದ 19ರವರೆಗೆ ಒಬ್ಬ ರೋಟೇರಿಯನ್‌ಒಂದು ಮರಒಂದು ಶಾಶ್ವತ ಪರಂಪರೆ ಎಂಬ ಧ್ಯೇಯವಾಕ್ಯ ಹಾಗೂ ಇಂದೇ ಒಂದು ಮರ ನೆಡಿನಾಳೆ ಹಸಿರು ಭವಿಷ್ಯ ಕಟ್ಟೋಣ ಎಂಬ ಘೋಷವಾಕ್ಯದಡಿ ಕರ್ನಾಟಕ, ಗೋವಾ ಹಾಗೂ ಮಹಾರಾಷ್ಟ್ರ ರಾಜ್ಯಗಳನ್ನು ಒಳಗೊಂಡ ರೋಟರಿ ಜಿಲ್ಲೆ 3170ರ ವ್ಯಾಪ್ತಿಯ ಎಲ್ಲ ಕ್ಲಬ್‌ಗಳು ಅಭಿಯಾನದಲ್ಲಿ ಪಾಲ್ಗೊಂಡಿದ್ದವು.

ಅಭಿಯಾನದಡಿ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಶಾಲೆಗಳು, ಸರ್ಕಾರಿ ಕಚೇರಿಗಳು, ಸಾರ್ವಜನಿಕ ಸ್ಥಳಗಳು, ಉದ್ಯಾನವನಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನೂರಾರು ದೇಶೀಯ ತಳಿಯ ಸಸಿಗಳನ್ನು ನೆಟ್ಟು, ಅವುಗಳ ಸಂರಕ್ಷಣೆ ಹಾಗೂ ನಿರ್ವಹಣೆಗೂ ಆದ್ಯತೆ ನೀಡಲಾಯಿತು. ಕೇವಲ ಸಸಿ ನೆಡುವುದಕ್ಕೆ ಸೀಮಿತವಾಗದೆ, ಅವುಗಳನ್ನು ಪೋಷಿಸುವ ಮಾದರಿ ಕಾರ್ಯ ಕೈಗೊಂಡಿದ್ದಕ್ಕೆ ಜಿಲ್ಲಾ ನಾಯಕರ ಮೆಚ್ಚುಗೆಗೆ ಪಾತ್ರವಾಯಿತು.

ಅಭಿಯಾನದಲ್ಲಿ ರೋಟರಾಕ್ಟರ್‌ಗಳು, ಇಂಟರಾಕ್ಟರ್‌ಗಳು, ವಿದ್ಯಾರ್ಥಿಗಳು, ಶಿಕ್ಷಕರು, ಸರ್ಕಾರಿ ಇಲಾಖೆಗಳ ಸಿಬ್ಬಂದಿ ಹಾಗೂ ಪರಿಸರ ಪ್ರೇಮಿಗಳು ಕೈಜೋಡಿಸಿದ್ದರು.

ಈ ಸಾಧನೆಯನ್ನು ಗುರುತಿಸಿ ಭಾನುವಾರ ಬೆಳಗಾವಿಯ ನೆಹರು ನಗರದ ಜೆ.ಎನ್.ಎಂ.ಸಿ. ಕ್ಯಾಂಪಸ್‌ನ ಡಾ. ಎಚ್.ಬಿ. ರಾಜಶೇಖರ ಆಡಿಟೋರಿಯಂನಲ್ಲಿ ನಡೆದ ಬಿಕಾನ್ ಮೆಂಬರ್‌ಶಿಪ್ ಸೆಮಿನಾರ್‌ನಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರೋಟರಿ ಡಿಸ್ಟ್ರಿಕ್ಟ್ ಗವರ್ನರ್ ಲೆನ್ನಿ ಡಾಕೊಸ್ತಾ ಹಾಗೂ ಆರ್.ಐ. ಡೈರೆಕ್ಟರ್ ರಾಜು ಸುಬ್ರಮಣಿಯನ್ ಅವರು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ಹಾಗೂ ಕಾರ್ಯದರ್ಶಿ ಅಕ್ಷಯ್ ಶೆಟ್ಟಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಅಭಿನಂದಿಸಿದರು.

ಸಸಿಗಳನ್ನು ಪ್ರಾಯೋಜಿಸಿದ್ದ ಗದುಗಿನ ನವೀನ ಕುಷ್ಟಗಿ ಹಾಗೂ ನಾಗೇಶ ಹಂಜಗಿ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಮೂಕ ಬಸವೇಶ್ವರ ಕ್ಷೇತ್ರದಲ್ಲಿ ಕಳಸಾರೋಹಣ ಶತಮಾನಗಳ ಪವಾಡ ಪರಂಪರೆಗೆ ಹೊಸ ಕಳೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಾತನ ಹಾಗೂ ಐತಿಹಾಸಿಕ ಹಿನ್ನೆಲೆಯ ಮೂಕ ಬಸವೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ಪೂರ್ಣಗೊಂಡ ಹಿನ್ನೆಲೆಯಲ್ಲಿ ಸೋಮವಾರ ನೂತನ ಗಣೇಶ ಹಾಗೂ ಆಂಜನೇಯ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು. ಶತಮಾನಗಳ ಇತಿಹಾಸ ಹಾಗೂ ಪವಾಡ ಪರಂಪರೆ ಹೊಂದಿರುವ ಕ್ಷೇತ್ರದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮಕ್ಕೆ ಅಪಾರ ಸಂಖ್ಯೆಯಲ್ಲಿ ಭಕ್ತರು ಸಾಕ್ಷಿಯಾದರು.

ಬೆಳಿಗ್ಗೆ ಗಂಜಿಗಟ್ಟಿ ಶ್ರೀ ಡಾ. ವೈಜನಾಥ ಶಿವಲಿಂಗೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಕಳಸಾರೋಹಣ ಹಾಗೂ ನೂತನ ಮೂರ್ತಿಗಳ ಪ್ರಾಣಪ್ರತಿಷ್ಠಾಪನೆ ವಿಧಿವಿಧಾನಗಳು ನೆರವೇರಿದವು. ಬಳಿಕ ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ನೇತೃತ್ವದಲ್ಲಿ ಧರ್ಮಸಭೆ ನಡೆಯಿತು.

ಧರ್ಮಸಭೆಯಲ್ಲಿ ಆಶೀರ್ವಚನ ನೀಡಿದ ಶ್ರೀ ಚನ್ನವೀರ ಮಹಾಸ್ವಾಮಿಗಳು, ದೇವರ ಮೇಲೆ ಅಚಲ ಭಕ್ತಿ ಹಾಗೂ ನಂಬಿಕೆ ಇಟ್ಟು ಬದುಕಿದರೆ ಕಷ್ಟಗಳನ್ನು ಎದುರಿಸುವ ಶಕ್ತಿ ದೊರೆಯುತ್ತದೆ. ಧಾರ್ಮಿಕ ಆಚರಣೆಗಳು ಮನುಷ್ಯನ ಮನಸ್ಸಿಗೆ ಶಾಂತಿ ಮತ್ತು ನೆಮ್ಮದಿ ನೀಡುತ್ತವೆ. ಮೂಕ ಬಸವೇಶ್ವರ ದೇವಸ್ಥಾನವು ಹಲವು ಶತಮಾನಗಳ ಇತಿಹಾಸ ಹಾಗೂ ಪವಾಡ ಪರಂಪರೆ ಹೊಂದಿರುವ ಜಾಗೃತ ಕ್ಷೇತ್ರವಾಗಿದ್ದು, ದೇವಸ್ಥಾನದ ಜೀರ್ಣೋದ್ಧಾರಕ್ಕೆ ಶ್ರಮಿಸಿದ ಎಲ್ಲರ ಕಾರ್ಯ ಸ್ತುತ್ಯರ್ಹವಾಗಿದೆ ಎಂದರು.

ಕರೇವಾಡಿಮಠದ ಶ್ರೀ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು ಮಾತನಾಡಿ, ಮಾನವ ಜನ್ಮ ಅತ್ಯಂತ ಪವಿತ್ರವಾದದ್ದು. ಪ್ರತಿಯೊಬ್ಬರೂ ಶ್ರದ್ಧೆ, ನಿಷ್ಠೆ ಹಾಗೂ ಸತ್ಯದ ಮಾರ್ಗದಲ್ಲಿ ಸಾಗಬೇಕು. ಭಕ್ತಿ ಮತ್ತು ಧಾರ್ಮಿಕ ಆಚರಣೆಗಳು ಉತ್ತಮ ಜೀವನಕ್ಕೆ ದಾರಿದೀಪವಾಗುತ್ತವೆ. ಮೂಕ ಬಸವೇಶ್ವರ ದೇವಸ್ಥಾನ ಭಕ್ತರ ಪಾಲಿಗೆ ಜಾಗೃತ ಕ್ಷೇತ್ರವಾಗಿದೆ ಎಂದರು.

> ಮೂಕ ಬಸವೇಶ್ವರ ದೇವಸ್ಥಾನ ಹಲವು ಶತಮಾನಗಳ ಇತಿಹಾಸ ಹಾಗೂ ಪವಾಡ ಪರಂಪರೆ ಹೊಂದಿರುವ ಜಾಗೃತ ಕ್ಷೇತ್ರ. ಹಿಂದಿನಿಂದಲೂ ಭಕ್ತರು ಕ್ಷೇತ್ರದ ಮೇಲೆ ಇಟ್ಟುಕೊಂಡಿರುವ ಅಪಾರ ನಂಬಿಕೆ ಇಂದಿಗೂ ಮುಂದುವರಿದಿರುವುದು ಶ್ಲಾಘನೀಯ. ದೇವಸ್ಥಾನದ ಜೀರ್ಣೋದ್ಧಾರಕ್ಕೆ ಶ್ರಮಿಸಿದ ಎಲ್ಲರ ಕಾರ್ಯ ಸ್ತುತ್ಯರ್ಹ.
> **- ಶ್ರೀ ಚನ್ನವೀರ ಮಹಾಸ್ವಾಮಿಗಳು**

ಸಭಾಧ್ಯಕ್ಷತೆ ವಹಿಸಿದ್ದ ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ ಮಾತನಾಡಿ, ಮೂಕ ಬಸವೇಶ್ವರ ದೇವಸ್ಥಾನದ ಇತಿಹಾಸ ಹಾಗೂ ಪವಾಡ ಪರಂಪರೆ ಭಕ್ತರಲ್ಲಿ ಅಪಾರ ನಂಬಿಕೆ ಮೂಡಿಸಿದೆ. ಇಲ್ಲಿ ಭಕ್ತಿಯಿಂದ ಪ್ರಾರ್ಥಿಸುವವರಿಗೆ ಇಷ್ಟಾರ್ಥಗಳು ನೆರವೇರುತ್ತವೆ ಎಂಬ ನಂಬಿಕೆ ಹಿಂದಿನಿಂದಲೂ ಇದೆ ಎಂದು ಹೇಳಿದರು.

ಮುಖಂಡ ಟಿ. ಈಶ್ವರ ಮಾತನಾಡಿ, ಮೂಕ ಬಸವೇಶ್ವರ ದೇವಸ್ಥಾನ ಲಕ್ಷ್ಮೇಶ್ವರದ ಧಾರ್ಮಿಕ ಪರಂಪರೆಯ ಪ್ರಮುಖ ಕೇಂದ್ರವಾಗಿದೆ.

ಜೀರ್ಣೋದ್ಧಾರ, ಕಳಸಾರೋಹಣ ಹಾಗೂ ನೂತನ ಮೂರ್ತಿಗಳ ಪ್ರತಿಷ್ಠಾಪನೆಯಿಂದ ದೇವಸ್ಥಾನದ ಪಾವಿತ್ರ್ಯ ಹಾಗೂ ಸೌಂದರ್ಯ ಮತ್ತಷ್ಟು ಹೆಚ್ಚಾಗಿದೆ. ನಿತ್ಯ ಪೂಜೆ, ಪ್ರಾರ್ಥನೆ ನಡೆಯುವ ಮೂಲಕ ಕ್ಷೇತ್ರದ ಪಾವಿತ್ರ್ಯ ಕಾಪಾಡಬೇಕು ಎಂದರು.

ನಿಂಗಪ್ಪ ಬನ್ನಿ, ವಿ.ಜಿ. ಪಡಗೇರಿ, ಮೈಲಾರಗೌಡ ನರಸಮ್ಮನವರ, ನಿವೃತ್ತ ಲೋಕಾಯುಕ್ತ ಡಿವೈಎಸ್‌ಪಿ ಶಂಕರ ರಾಗಿ, ಬಿ.ಕೆ. ನಾಗಲಾಂಬಿಕೆ, ಯಲ್ಲಮ್ಮ ದುರಗಣ್ಣವರ, ಪ್ರವೀಣ ಬಾಳಿಕಾಯಿ, ಕೆ.ಒ. ಹುಲಿಕಟ್ಟಿ, ಮಹೇಶ ಲಿಂಬಯ್ಯಸ್ವಾಮಿಮಠ, ಶಿವಪುತ್ರಪ್ಪ ಚಾಕಲಬ್ಬಿ, ಅಶೋಕ ಬಿಸೇರೊಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಓಣಿಯ ಹಿರಿಯರು, ಯುವಕರು, ಮಹಿಳೆಯರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಎಸ್.ಎಫ್. ಆದಿ ನಿರೂಪಿಸಿದರು.

## ಅಂಗಾಂಗ ದಾನ ಪ್ರತಿಜ್ಞೆ ಅಭಿಯಾನಕ್ಕೆ ಎಎಸ್‌ಎಸ್ ಕಾಲೇಜು ಸಾಥ್

**ವಿಜಯಸಾಕ್ಷಿ ಸುದ್ದಿ, ಗದಗ**

ಅಂಗಾಂಗ ದಾನದ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಗದಗದ ಎಎಸ್‌ಎಸ್ ಕಾಲೇಜಿನಲ್ಲಿ ನಡೆದ ಅಂಗಾಂಗ ದಾನ ಪ್ರತಿಜ್ಞೆ ಅಭಿಯಾನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಜಿಲ್ಲೆಯಲ್ಲಿ ಅಂಗಾಂಗ ದಾನದ ಉದಾತ್ತ ಉದ್ದೇಶದ ಕುರಿತು ಜಾಗೃತಿ ಮೂಡಿಸಿ, ಹೆಚ್ಚಿನ ಜನರನ್ನು ಪ್ರತಿಜ್ಞಾ ಅಭಿಯಾನಕ್ಕೆ ಸೇರ್ಪಡೆಗೊಳಿಸುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ. ಅಭಿಯಾನ ಯಶಸ್ವಿಗೊಳಿಸಲು ಸಹಕಾರ ನೀಡಿದ ಎಎಸ್‌ಎಸ್ ಕಾಲೇಜಿನ ಅಧ್ಯಕ್ಷ ಸಿಎ ಆನಂದ್ ಪೋತ್ನಿಸ್, ಪ್ರಾಂಶುಪಾಲ ಶ್ರೀ ನಾಯ್ಕರ್ ಹಾಗೂ ಶ್ರೀ ಲಿಂಗರಾಜ್ ಅವರಿಗೆ ಎಚ್.ಕೆ. ಪಾಟೀಲ ಸೇವಾ ತಂಡದ ಡಾ. ನೂರಾನಿ ಕೃತಜ್ಞತೆ ಸಲ್ಲಿಸಿದರು. ಅಧ್ಯಕ್ಷ ಪ್ರಭು ಬುರಬುರೆ ಹಾಗೂ ಅಧ್ಯಕ್ಷ ಡಾ. ನೂರಾನಿ ಅವರ ಮಾರ್ಗದರ್ಶನದಲ್ಲಿ ಎಚ್.ಕೆ. ಪಾಟೀಲ ಸೇವಾ ತಂಡದ ಡಾ. ರಾಥೋಡ್ ಹಾಗೂ ತಂಡದ ಪ್ರಮುಖರಾದ ವಿಜಯಕುಮಾರ್, ದೇವೇಂದ್ರ, ಜಾಫರ್ ಮತ್ತು ಯಾಕೂಬ್ ಹರ್ಲಾಪುರ ಅವರು ಅಭಿಯಾನವನ್ನು ಮತ್ತಷ್ಟು ಬಲಪಡಿಸಲು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅಂಗಾಂಗ ದಾನ ಪ್ರತಿಜ್ಞೆ ಅಭಿಯಾನವು ವರ್ಷವಿಡೀ ಮುಂದುವರಿಯಲಿದ್ದು, ಗದಗವನ್ನು ಕರ್ನಾಟಕದಲ್ಲೇ ಅಂಗಾಂಗ ದಾನ ಪ್ರತಿಜ್ಞೆಯಲ್ಲಿ ನಂ.1 ಸ್ಥಾನಕ್ಕೆ ಕೊಂಡೊಯ್ಯುವ ಗುರಿಯನ್ನು ಹೊಂದಲಾಗಿದೆ ಎಂದು ತಂಡದ ಸದಸ್ಯರು ತಿಳಿಸಿದ್ದಾರೆ.

> ಒಂದು ಅಂಗಾಂಗ ದಾನದ ಪ್ರತಿಜ್ಞೆ ಮತ್ತೊಬ್ಬ ಮನುಷ್ಯನಿಗೆ ಅಮೂಲ್ಯವಾದ ಜೀವನದ ಉಡುಗೊರೆಯಾಗಬಹುದು. ಪ್ರತಿಯೊಬ್ಬ ನಾಗರಿಕ, ಸಂಸ್ಥೆ ಹಾಗೂ ವಿದ್ಯಾರ್ಥಿಗಳು ಈ ಮಹತ್ವದ ಅಭಿಯಾನಕ್ಕೆ ಕೈಜೋಡಿಸಬೇಕು. ಒಟ್ಟಾಗಿ ಗದಗವನ್ನು ಕರ್ನಾಟಕದಲ್ಲಿ ನಂ.1 ಮಾಡೋಣ.
> **-ಅಂಗಾಂಗ ದಾನ ಪ್ರತಿಜ್ಞೆ ಅಭಿಯಾನ ತಂಡ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka